ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಕನ್ನಡ ಮಾಸಪತ್ರಿಕೆ

# ಸಹಕಾರ

ಮಾಸಪತ್ರಿಕೆ

ಸಂಪುಟ : 6 । ಸಂಚಿಕೆ : 3 । ಮಾರ್ಚ್ - 2024 । ಪುಟಗಳು : 20 । ಬೆಲೆ : 25/-

ಕರ್ನಾಟಕ ರಾಜ್ಯ
ಸಹಕಾರ ಪತ್ತಿನ ಸಂಘಗಳ
ಮಹಾಮಂಡಳದ ಪ್ರಕಟಣೆ

## ಸಮಸ್ತ ಸಹಕಾರಿ ಬಂಧುಗಳಿಗೆ ಮಹಾ ಶಿವರಾತ್ರಿಯ ಶುಭಾಶಯಗಳು



ವಿ. ರಾಜು
ಅಧ್ಯಕ್ಷರು





ಕೆ. ಕೆ. ಮಹೇಂದ್ರ ಪ್ರಸಾದ್‌ಗೌಡ
ಉಪಾಧ್ಯಕ್ಷರು

ಹಾಗೂ ಆಡಳಿತ ಮಂಡಳಿ ಸದಸ್ಯರು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು.

## ಗೋಕಾಕ್‌ನಲ್ಲಿ ಪತ್ತಿನ ಸಹಕಾರ ಸಂಘಗಳ ತರಬೇತಿ ಕಾರ್ಯಾಗಾರ



# ಪತ್ತಿನ ಮಹಾಮಂಡಳದ ವತಿಯಿಂದ ಸಹಕಾರ ಸಚಿವರ ಭೇಟಿ-ಗೌರವ ಸಲ್ಲಿಕೆ



ಮಾನ್ಯ ಸಹಕಾರ ಸಚಿವ ಶ್ರೀ ಕೆ.ಎನ್. ರಾಜಣ್ಣರವರನ್ನು ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಹಕಾರ ಸಂಘಗಳ ಮಹಾಮಂಡಳದ ಅಧ್ಯಕ್ಷರಾದ ವಿ.ರಾಜುರವರು ಭೇಟಿ ಮಾಡಿ ಗೌರವಿಸಿದರು. ಪತ್ತಿನ ಸಹಕಾರ ಮಹಾಮಂಡಳಕ್ಕೆ ಭೇಟಿ ನೀಡಿ ಪತ್ತಿನ ಚಳವಳಿ ಬೆಳವಣಿಗೆ ಕುರಿತು ಮಾರ್ಗದರ್ಶನ ಮಾಡಲು ಸಚಿವರನ್ನು ಕೋರಿದರು.



ಮಾನ್ಯ ಸಹಕಾರ ಸಚಿವರಾದ ಕೆ.ಎನ್. ರಾಜಣ್ಣ ಅವರನ್ನು ಭೇಟಿ ಮಾಡಿದ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಹಕಾರ ಸಂಘಗಳ ಮಹಾಮಂಡಳದ ಅಧ್ಯಕ್ಷರಾದ ವಿ.ರಾಜು ಅವರು ಪತ್ತಿನ ಮಹಾಮಂಡಳಕ್ಕೆ ಪತ್ತಿನ ಸಹಕಾರ ಸಂಘಗಳು ಶಿಕ್ಷಣ ನಿಧಿ ಪಾವತಿಸಲು ಸಹಕಾರ ಸಂಘಗಳ ಕಾಯ್ದೆ ಮತ್ತು ನಿಯಮಕ್ಕೆ ತಿದ್ದುಪಡಿಗೆ ಶಿಫಾರಸ್ಸು ಮಾಡುವಂತೆ ಸಚಿವರನ್ನು ಕೋರಿ ಮನವಿ ಸಲ್ಲಿಸಿದರು.

# ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಆಡಳಿತ ಮಂಡಳಿ



ಶಿದ್ದನಗೌಡ ಸಂಣರಾಮನಗೌಡ ಪಾಟೀಲ
ಸಹಕಾರಿ ಪಿತಾಮಹ



ಶ್ರೀ ಬಿ.ಎಲ್. ಲಕ್ಕೇಗೌಡರು
ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಸಂಸ್ಥಾಪಕ ಅಧ್ಯಕ್ಷರು



ಶ್ರೀ ವಿ. ರಾಜು
ಅಧ್ಯಕ್ಷರು



ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ
ಉಪಾಧ್ಯಕ್ಷರು



ಶ್ರೀಮತಿ ಕೆ. ಲಲಿತ ಜಿ.ಟಿ. ದೇವೇಗೌಡ
ನಿರ್ದೇಶಕರು



ಶ್ರೀ ಸಿ.ಎಂ. ಮಾರೇಗೌಡ
ನಿರ್ದೇಶಕರು



ಡಾ. ಬಿ.ಡಿ. ಭೂಕಾಂತ
ನಿರ್ದೇಶಕರು



ಡಾ. ಸಂಜಯ ಪಂ. ಹೊಸಮಠ
ನಿರ್ದೇಶಕರು



ಶ್ರೀ ಎಂ.ಜೆ. ನರೇಂದ್ರ ಕುಮಾರ
ನಿರ್ದೇಶಕರು



ಶ್ರೀ ಡಿ. ಚನ್ನಯ್ಯ
ನಿರ್ದೇಶಕರು



ಶ್ರೀ ಕೆ. ಕೃಷ್ಣಮೂರ್ತಿ
ನಿರ್ದೇಶಕರು



ಶ್ರೀ ಜಿ. ಮಲ್ಲಿಕಾರ್ಜುನಯ್ಯ
ನಿರ್ದೇಶಕರು



ಶ್ರೀ ತಮ್ಮಣ್ಣ ಬಿ. ಕೆಂಚರಡ್ಡಿ
ನಿರ್ದೇಶಕರು



ಶ್ರೀ ಧರೇಪ್ಪ ಎಂ. ಆಲಗೂರ
ನಿರ್ದೇಶಕರು




ಶ್ರೀ ಗುರುಪಾದಪ್ಪಗೌಡ ಬಿ. ಪಾಟೀಲ
ನಿರ್ದೇಶಕರು



ಶ್ರೀ ಹೊನ್ನಯ್ಯ ವಿ. ಹಿರೇಮಠ
ನಿರ್ದೇಶಕರು



ಶ್ರೀ ಪಿ.ಕೆ. ಜಯಕೃಷ್ಣೇಗೌಡ
ನಿರ್ದೇಶಕರು



ಶ್ರೀ ಶೇಖರಗೌಡ ಮಾಲಿ ಪಾಟೀಲ
ನಿರ್ದೇಶಕರು



ಶ್ರೀ ಹೆಚ್.ಟಿ. ನಾಗೇಶ್
ನಿರ್ದೇಶಕರು



ಶ್ರೀ ಡಿ.ಆರ್. ನಾಗೇಶಪ್ಪ
ನಿರ್ದೇಶಕರು



ಶ್ರೀ ಉಮೇಶ ಶಿ ಬಾಳಿ
ನಿರ್ದೇಶಕರು



ಶ್ರೀ ರವೀಂದ್ರ ಪ್ರಲ್ಹಾದ ಕಲಬುರ್ಗಿ
ನಿರ್ದೇಶಕರು



ಶ್ರೀ ಚಿತ್ತರಂಜನ್ ಬೋಳಾರ್
ನಿರ್ದೇಶಕರು



ಶ್ರೀ ಪ್ರಜ್ವಲ್ ಕೆ.ಎನ್.
ಮುಖ್ಯಕಾರ್ಯನಿರ್ವಹಣಾಧಿಕಾರಿ

**SAHAKARA VARTHA PATHRIKE KANNADA MONTHLY**
RNI-Reg No. KARKAN/2018/75796
Post Reg No. KA-BGW/1816/2022-24
Posting Date : 1 and 5 Every Month
Posted at : P/C RMS Bhavan, Bangalore PSO,
Blore-26 Published On : 29th of Previous Month
License to post without prepayment
PMG BG/WPP-405/2022-2024




ಇಂದ : ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು.
ನಂ. 16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560003

**Printed at : Biligiri Printers**
**Chamrajpet, Bengaluru - 18**

## ಸಂಪಾದಕೀಯ



**ವಿ. ರಾಜು**
**ಅಧ್ಯಕ್ಷರು**

ಹೊಸ ಸದಸ್ಯರ ಸೇರ್ಪಡೆ, ಷೇರು ಠೇವಣಿ ಸಂಗ್ರಹದ ಜೊತೆಗೆ 2047ರ ಭಾರತ ಸ್ವಾತಂತ್ರ್ಯೋತ್ಸವದ ಶತಮಾನೋತ್ಸವದ ವೇಳೆಗೆ ದೇಶದ ಆರ್ಥಿಕತೆ ಸಹಕಾರ ಕ್ಷೇತ್ರ ಬಹುದೊಡ್ಡ ಕೊಡುಗೆ ನೀಡಲು ಎಲ್ಲಾ ರೀತಿಯ ಸಹಕಾರ ಸಂಸ್ಥೆಗಳು ಈಗಿನಿಂದಲೇ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಯೋಜನೆಗಳನ್ನು ರೂಪಿಸಿಕೊಳ್ಳುವುದು ಸೂಕ್ತ. ಇದರಿಂದ ಚಳುವಳಿಯ ವೇಗ ಹೆಚ್ಚಾಗಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೆಬ್ರವರಿ–16ರಂದು 2024–25ನೇ ಸಾಲಿನ 3.71 ಲಕ್ಷ ಕೋಟಿ ರೂ.ಗಳ ಆಯವ್ಯಯವನ್ನು ಮಂಡಿಸಿದ್ದಾರೆ.

# ಕೇಂದ್ರ ರಾಜ್ಯ ಬಜೆಟ್ – ಸ್ವಾಗತಾರ್ಹ

ಫೆಬ್ರವರಿ ಮಾಹೆಯ ಮೊದಲ ವಾರದಲ್ಲಿ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು 47.66 ಲಕ್ಷ ಕೋಟಿ ರೂ.ಗಳ 2024–25ನೇ ಸಾಲಿನ ಬಜೆಟ್ ಮಂಡಿಸಿದ್ದಾರೆ. ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸಹಕಾರ ಸಚಿವಾಲಯ ಸ್ಥಾಪನೆಯಾದ ನಂತರ ದೇಶದಲ್ಲಿ ಸಹಕಾರ ಕ್ಷೇತ್ರದಲ್ಲಿ ಹಲವು ಮಹತ್ತರ ಬದಲಾವಣೆಗಳಾಗಿವೆ.

ನೂತನ ಕೇಂದ್ರ ಸಹಕಾರ ನೀತಿಯ ವರದಿ ಕೇಂದ್ರ ಸರ್ಕಾರಕ್ಕೆ ಶೀಘ್ರದಲ್ಲಿ ಸಲ್ಲಿಕೆಯಾಗಲಿದೆ. ಸಹಕಾರ ಸಂಸ್ಥೆಗಳು ಸ್ವಾಯತ್ತತಾ ಸಂಸ್ಥೆಗಳಾಗಿ ಕಾರ್ಯನಿರ್ವಹಿಸಲು ಹೊಸ ಸಹಕಾರ ನೀತಿ ಪೂರಕವಾಗಬಲ್ಲದು ಎಂದು ಆಶಿಸಲಾಗಿದೆ. ಮುಂದಿನ ಮೂರು ವರ್ಷಗಳಲ್ಲಿ ಹೊಸದಾಗಿ 2 ಲಕ್ಷ ವಿವಿಧ ರೀತಿಯ ಸಹಕಾರ ಸಂಘಗಳು ಆರಂಭವಾಗುವ ನಿರೀಕ್ಷೆ ಇದ್ದು ಈಗಾಗಲೇ ಸಹಸ್ರಾರು ಸಂಘಗಳು ನೂತನವಾಗಿ ನೋಂದಣಿಯಾಗಿ ಕಾರ್ಯ ಆರಂಭಿಸಿವೆ.

ಇವೆಲ್ಲವೂ ದೇಶದ ಸಹಕಾರ ಚಳುವಳಿಯ ಬಲವರ್ಧನೆಯಲ್ಲಿ ಪ್ರಮುಖ ಪಾತ್ರ ವಹಿಸಬಲ್ಲವು. ಹೊಸ ಸದಸ್ಯರ ಸೇರ್ಪಡೆ, ಷೇರು, ಠೇವಣಿ ಸಂಗ್ರಹದ ಜೊತೆಗೆ 2047ರ ಭಾರತ ಸ್ವಾತಂತ್ರ್ಯೋತ್ಸವದ ಶತಮಾನೋತ್ಸವದ ವೇಳೆಗೆ ದೇಶದ ಆರ್ಥಿಕತೆಗೆ ಸಹಕಾರ ಕ್ಷೇತ್ರ ಬಹುದೊಡ್ಡ ಕೊಡುಗೆ ನೀಡಲು ಎಲ್ಲಾ ರೀತಿಯ ಸಹಕಾರ ಸಂಸ್ಥೆಗಳು ಈಗಿನಿಂದಲೇ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಯೋಜನೆಗಳನ್ನು ರೂಪಿಸಿಕೊಳ್ಳುವುದು ಸೂಕ್ತ. ಇದರಿಂದ ಚಳುವಳಿಯ ವೇಗ ಹೆಚ್ಚಾಗಲಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೆಬ್ರವರಿ–16ರಂದು 2024–25ನೇ ಸಾಲಿನ 3.71 ಲಕ್ಷ ಕೋಟಿ ರೂ.ಗಳ ಆಯವ್ಯಯವನ್ನು ಮಂಡಿಸಿದ್ದಾರೆ. ಸಹಕಾರ ಕ್ಷೇತ್ರಕ್ಕೆ ವಿಶೇಷವಾಗಿ ರಾಜ್ಯದ 36 ಲಕ್ಷಕ್ಕೂ ಅಧಿಕ ರೈತರಿಗೆ 27 ಸಾವಿರ ಕೋಟಿ ರೂ.ಗಳಿಗೂ ಅಧಿಕ ಕೃಷಿ ಸಾಲ ಘೋಷಿಸಿದ್ದಾರೆ. ಇದು ಸ್ವಾಗತಾರ್ಹ ವಿಚಾರವೂ ಆಗಿದೆ.

ಪ್ರತಿವರ್ಷ ಸಹಕಾರ ಸಂಸ್ಥೆಗಳು ಕೃಷಿ ಸಾಲ ವಿತರಣೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ರೈತರಿಗೆ ಅಗತ್ಯ ಸಾಲ ನೀಡುತ್ತಿರುವುದು ಶ್ಲಾಘನೀಯ ಹಾಗೂ ಸಂತಸದ ವಿಚಾರವಾಗಿದೆ. ಇದರಿಂದ ರಾಜ್ಯ ಸರ್ಕಾರ ಆಹಾರಭದ್ರತೆಗೆ ಹೆಚ್ಚಿನ ಒತ್ತು ನೀಡುತ್ತಿದೆಯಲ್ಲದೇ ಸಹಕಾರ ಕ್ಷೇತ್ರದ ಅವಲಂಬನೆ, ವಿಶ್ವಾಸ, ನಂಬಿಕೆ, ಹೆಚ್ಚಿಸಿಕೊಳ್ಳಲು ಪರಿಣಾಮಕಾರಿ ಸೇವೆ ಸಲ್ಲಿಸಲು ಸಹಕಾರಿಯಾಗಿದೆ.

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

# ಸಹಕಾರ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ

**ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು**
ನಂ. 16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್‌ರಸ್ತೆ,
ಮಲ್ಲೇಶ್ವರಂ, ಬೆಂಗಳೂರು – 560003
ದೂರವಾಣಿ ಸಂಖ್ಯೆ :
080–23564444 / 23464033 / 23464034
ಇ–ಮೇಲ್ : info@ksccsf.org
ksccsfltd@gmail.com, ವೆಬ್ : www.ksccsf.org

**ಸಂಪಾದಕ ಮಂಡಳಿ**
ಅಧ್ಯಕ್ಷರು / ಪ್ರಧಾನ ಸಂಪಾದಕರು :
**ಶ್ರೀ ವಿ. ರಾಜು**
ಕಾರ್ಯನಿರ್ವಾಹಕ ಸಂಪಾದಕರು:
**ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ**
ಸದಸ್ಯರು : **ಡಾ॥ ಸಂಜಯ ಪಿ. ಹೊಸಮಠ**
**ಶ್ರೀ ಎಂ.ಜೆ. ನರೇಂದ್ರಕುಮಾರ**
**ಶ್ರೀ ಕೆ. ಕೃಷ್ಣಮೂರ್ತಿ**
**ಶ್ರೀ ಡಿ.ಆರ್. ನಾಗೇಶಪ್ಪ**
**ಶ್ರೀ ಹೊನ್ನಯ್ಯ ವೀ ಹಿರೇಮಠ**
**ಶ್ರೀ ಚಿತ್ತರಂಜನ್ ಬೋಳಾರ್**
ಸಂಪಾದಕರು :
**ಪ್ರಜ್ವಲ್ ಕೆ.ಎನ್.**
ಮುಖ್ಯಕಾರ್ಯನಿರ್ವಹಣಾಧಿಕಾರಿ




ದಿನಾಂಕ : 24.02.2024ರಂದು ಗುಜರಾತ್‌ನ ದ್ವಾರಕಾದಲ್ಲಿ ಗುಜರಾತ್ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ನಿರ್ದೇಶಕರುಗಳಾದ ಡಾ॥ಸಂಜಯ ಪಿ ಹೊಸಮಠ, ತಮ್ಮಣ್ಣ ಬಾಲಪ್ಪ ಕೆಂಚರಡ್ಡಿ ಹಾಗೂ ಹೆಚ್.ಟಿ.ನಾಗೇಶ್‌ರವರುಗಳು ಭಾಗವಹಿಸಿದ್ದರು. ವೇದಿಕೆಯ ಮೇಲೆ ಗುಜರಾತ್ ಪತ್ತಿನ ಮಹಾಮಂಡಳದ ಅಧ್ಯಕ್ಷರಾದ ಘನಶಾಮಭಾಯಿ ಅಮೀನ ಹಾಗೂ ಮಹಾರಾಷ್ಟ್ರ ಪತ್ತಿನ ಸಂಘಗಳ ಮಹಾಮಂಡಳದ ಅಧ್ಯಕ್ಷರಾದ ಕಾಕ ಕೋಯಿತೇ ಹಾಗೂ ಸಭೆಯಲ್ಲಿ ಗುಜರಾತ್ ರಾಜ್ಯದ ಸಾವಿರಾರು ಪತ್ತಿನ ಸಂಘಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

**ಸುಭಾಷಿತ :** ನಿಮಗೆ ಸಹಾಯ ಮಾಡಿದವರನ್ನು ಮರೆಯಬೇಡಿ, ನಿಮ್ಮನ್ನು ನಂಬಿದವರನ್ನು ಎಂದೂ ಕೈಬಿಡಬೇಡಿ. – ಸ್ವಾಮಿ ವಿವೇಕಾನಂದ

ಸಹಕಾರ ವಾರ್ತಾ ಪತ್ರಿಕೆ ಚಂದಾದಾರರಾಗ ಬಯಸುವವರು ಚಂದಾ ಹಣವನ್ನು “ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು” ಇವರ ಹೆಸರಿಗೆ ಚೆಕ್ ಅಥವಾ ಡಿಡಿಯನ್ನು ಬರೆದು ಕಳುಹಿಸಬೇಕಾಗಿ ವಿನಂತಿ. - ಸಿ.ಇ.ಒ.
ಐದು ವರ್ಷಗಳ ಚಂದಾ: ರೂ : 1770/-

**ಸೂಚನೆ :**
ಈ ಪತ್ರಿಕೆಯಲ್ಲಿ ಪ್ರಕಟವಾಗುವ ಲೇಖನಗಳಲ್ಲಿನ ಅನಿಸಿಕೆ, ಅಭಿಪ್ರಾಯಗಳು ಆಯಾ ಬರಹಗಾರರದೇ ಆಗಿರುತ್ತದೆ ವಿನಃ ಪತ್ರಿಕೆ / ಮಹಾಮಂಡಳದ ವಿಚಾರಗಳಾಗಿರುವುದಿಲ್ಲ.
- ಸಂಪಾದಕರು,
ಸಹಕಾರ ವಾರ್ತಾ ಪತ್ರಿಕೆ.

# ರಾಜ್ಯ ಬಜೆಟ್ 2024-25 : ಕೃಷಿ, ರೈತರ ಸಬಲೀಕರಣ, ಕೈಗಾರಿಕೆ, ಮೂಲಸೌಕರ್ಯ, ಆಧುನಿಕ ಉದ್ಯಮಗಳಿಗೆ ಒತ್ತು, ಉದ್ಯೋಗ ಸೃಷ್ಟಿಯ ಕಡೆಗೆ ಗಮನ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2024-25ನೇ ಸಾಲಿನ ರಾಜ್ಯ ಬಜೆಟ್ ಅನ್ನು ಮಂಡಿಸಿದ್ದು, ಒಟ್ಟು 3,71,383 ಕೋಟಿ ಗಾತ್ರದ ಬಜೆಟ್ ಮಂಡಿಸಿರುವ ಸಿದ್ದರಾಮಯ್ಯ ಅವರು, ಎಲ್ಲ ಇಲಾಖೆಗಳಿಗೂ 2024-25ನೇ ಸಾಲಿನ ಹೊಸ ಯೋಜನೆಗಳನ್ನು ಘೋಷಿಸಿದ್ದಾರೆ.


ಮುಖ್ಯಮಂತ್ರಿಗಳು ತಮ್ಮ ಬಜೆಟಿನಲ್ಲಿ ಶಕ್ತಿಶಾಲಿ ಕರ್ನಾಟಕ ನಿರ್ಮಾಣದ ತಮ್ಮ ದೂರದೃಷ್ಟಿಯನ್ನು ರಾಜ್ಯದ ಜನತೆಯ ಮುಂದಿಟ್ಟಿದ್ದಾರೆ. ಕೃಷಿ, ರೈತರ ಸಬಲೀಕರಣ, ಕೈಗಾರಿಕೆ, ಮೂಲಸೌಕರ್ಯ, ಆಧುನಿಕ ಉದ್ಯಮಗಳಿಗೆ ಒತ್ತು, ಉದ್ಯೋಗ ಸೃಷ್ಟಿಯ ಕಡೆಗೆ ಗಮನ, ಹಲವು ಪುಣ್ಯಕ್ಷೇತ್ರಗಳಲ್ಲಿ ಸೌಲಭ್ಯ ಹೆಚ್ಚಳ, ಮೀನುಗಾರಿಕೆಗೆ ಆದ್ಯತೆ, ಆರೋಗ್ಯ ಕ್ಷೇತ್ರದ ಉನ್ನತೀಕರಣ ಇವೆಲ್ಲವುಗಳಿಗೂ ಅವರು ಸಮಾನ ಒತ್ತು ನೀಡುವುದರ ಮೂಲಕ ಇಡೀ ಕರ್ನಾಟಕದ ಅಭಿವೃದ್ಧಿಗೆ ಹೊಂದಿರುವ ಬದ್ಧತೆಯನ್ನು ಪ್ರದರ್ಶಿಸಿದ್ದಾರೆ. ಇವುಗಳು ಮುಂಬರುವ ದಿನಗಳಲ್ಲಿ ಫಲ ಕೊಡಲಿವೆ ಎಂದು ಅವರು ಪ್ರತಿಪಾದಿಸಿದ್ದಾರೆ.

ಮುಖ್ಯಮಂತ್ರಿಗಳು ಮಂಡನೆ ಮಾಡಿರುವ ಬಜೆಟಿನಲ್ಲಿ ಹಲವು ಹೊಸ ಯೋಜನೆಗಳು ಹಾಗೂ ಹಲವು ಅಭಿವೃದ್ಧಿ ಕಾಮಗಾರಿಗಳ ಘೋಷಣೆ ಆಗಿದೆ. ಬಜೆಟಿನಲ್ಲಿ ಘೋಷಣೆಯಾದ ಕೆಲ ಪ್ರಮುಖ ವಿವರಗಳು ಇಂತಿದೆ:



### ಸಹಕಾರ ಇಲಾಖೆ

- ಪ್ರಸಕ್ತ ಸಾಲಿನಲ್ಲಿ ರಾಜ್ಯದ 36 ಲಕ್ಷಕ್ಕಿಂತ ಹೆಚ್ಚಿನ ರೈತರಿಗೆ 27,000 ಕೋಟಿ ರೂ.ಗಳಷ್ಟು ದಾಖಲೆಯ ಬೆಳೆ ಸಾಲ ವಿತರಣೆ ಗುರಿ.
- ಸರ್ಕಾರದ ಹಿಂದಿನ ಅವಧಿಯ ಬೆಳೆಸಾಲ ಮನ್ನಾ ಬಾಬ್ತು ಬಾಕಿ ಇರುವ 132 ಕೋಟಿ ರೂ. ಮೊತ್ತ ಡಿಸಿಸಿ ಬ್ಯಾಂಕುಗಳಿಗೆ ಬಿಡುಗಡೆ; ಮಧ್ಯಮಾವಧಿ ಮತ್ತು ದೀರ್ಘಾವಧಿ ಸುಸ್ತಿ ಸಾಲಗಳ ಬಡ್ಡಿ ಮನ್ನಾ ಹಿನ್ನೆಲೆಯಲ್ಲಿ ಡಿಸಿಸಿ ಮತ್ತು ಪಿಕಾರ್ಡ್ ಬ್ಯಾಂಕುಗಳಿಗೆ 450 ಕೋಟಿ ರೂ. ಅನುದಾನ; ಟಿ.ಎ.ಪಿ.ಸಿ.ಎಂ.ಎಸ್.ಗಳಿಗೆ ಗೋದಾಮು ನಿರ್ಮಾಣಕ್ಕೆ ಶೇ. 6ರ ಬಡ್ಡಿ ಸಹಾಯಧನ.



- ರಾಜ್ಯದ ಪ್ರಮುಖ ಬೆಳೆಗಳಾದ ಅಡಿಕೆ, ಈರುಳ್ಳಿ, ದ್ರಾಕ್ಷಿ, ಮಾವು, ಬಾಳೆ ಮತ್ತು ಇತರ ತೋಟಗಾರಿಕಾ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಘೋಷಿಸಲು ಹಾಗೂ ಎಂ.ಎಸ್. ಸ್ವಾಮಿನಾಥನ್ ಸಮಿತಿ ವರದಿ ಅನ್ವಯ ಬೇಸಾಯ ವೆಚ್ಚ ಮತ್ತು ಶೇ.50 ಲಾಭಾಂಶ ಆಧಾರದಡಿ ಕನಿಷ್ಠ ಬೆಂಬಲ ಬೆಲೆ ನಿಗದಿಗೆ ಕೇಂದ್ರಕ್ಕೆ ಒತ್ತಾಯ.
- ಮಾಧ್ಯಮಿಕ, ಫೆಡರಲ್ ಹಾಗೂ ಅಪೆಕ್ಸ್ ಸಹಕಾರ ಸಂಘಗಳ ಆಡಳಿತ ಮಂಡಳಿಯಲ್ಲಿ ಮೀಸಲಾತಿ ತರಲು ಅಧಿನಿಯಮಗಳಿಗೆ ತಿದ್ದುಪಡಿ.
- ಕೃಷಿ ಉತ್ಪನ್ನ ಸಂಸ್ಕರಣೆ, ಮಾರುಕಟ್ಟೆ ಸಂಪರ್ಕ ಮತ್ತು ಮೌಲ್ಯವರ್ಧನೆಗೆ ಪೂರಕ ಕ್ರಮಗಳು:
  - ಒಟ್ಟು 130 ಕೋಟಿ ರೂ. ವೆಚ್ಚದಲ್ಲಿ 7 ಶೀತಲಗೃಹ ನಿರ್ಮಾಣ.
  - ರಾಯಚೂರು ಹಾಗೂ ರಾಣೆಬೆನ್ನೂರಿನಲ್ಲಿ ಒಣಮೆಣಸಿನಕಾಯಿ ಮಾರುಕಟ್ಟೆ ಪ್ರಾರಂಭ.
  - ಮಂಗಳೂರಿನಲ್ಲಿ 35 ಕೋಟಿ ರೂ. ವೆಚ್ಚದಲ್ಲಿ ಅತ್ಯಾಧುನಿಕ ಕೃಷಿ ಸಂಕೀರ್ಣ ಸ್ಥಾಪನೆ.
  - 10 ಕೋಟಿ ರೂ. ವೆಚ್ಚದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಎಲ್ಲಾ ಕಾರ್ಯ ಚಟುವಟಿಕೆಗಳ ಡಿಜಿಟಲೀಕರಣ.
- ಎ.ಪಿ.ಎಂ.ಸಿ ಗಳನ್ನು ಬಲಪಡಿಸಲು ಎಪಿಎಂಸಿ ಕಾಯ್ದೆ ತಿದ್ದುಪಡಿ ಹಿಂಪಡೆಯುವುದು, ಮಾರುಕಟ್ಟೆ ಅಭಿವೃದ್ಧಿ ಸಹಾಯ ನಿಧಿ ಸ್ಥಾಪನೆ ಹಾಗೂ ಬೆಂಬಲ ಬೆಲೆ ಯೋಜನೆ ಜಾರಿಗೆ ಶಾಸನಾತ್ಮಕ ಬೆಂಬಲ ನೀಡಲು ಕ್ರಮ.

- ರಾಜ್ಯದಲ್ಲಿ ಕಬ್ಬು ಬೆಳೆಗಾರರಿಗೆ ತೂಕದಲ್ಲಾಗುವ ಮೋಸ ತಡೆಗಟ್ಟಲು ಎಲ್ಲಾ ಸಕ್ಕರೆ ಕಾರ್ಖಾನೆಗಳ ಬಳಿ ಎಪಿಎಂಸಿಗಳ ಮೂಲಕ Weigh Bridgeಗಳ ಸ್ಥಾಪನೆ.

### ಕೃಷಿ ಇಲಾಖೆ



- ಕೃಷಿ ಮತ್ತು ಪೂರಕ ಚಟುವಟಿಕೆಗಳ ನೀತಿ ಮತ್ತು ಯೋಜನೆಗಳ ಸಂಯೋಜನೆ ಹಾಗೂ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ 'ಕೃಷಿ ಅಭಿವೃದ್ಧಿ ಪ್ರಾಧಿಕಾರ' ರಚನೆ.
- ಕೈಗೆಟಕುವ ದರದಲ್ಲಿ ಸಂಸ್ಕರಿಸಿದ ಸಿರಿಧಾನ್ಯಗಳು ಮತ್ತು ಮೌಲ್ಯವರ್ಧಿತ ಸಿರಿಧಾನ್ಯ ಉತ್ಪನ್ನಗಳನ್ನು ಒದಗಿಸಲು 'ನಮ್ಮ ಮಿಲ್ಲೆಟ್' ಹೊಸ ಕಾರ್ಯಕ್ರಮ ಪ್ರಾರಂಭ.
- ಆಹಾರ ಸಂಸ್ಕರಣಾ ಕ್ಷೇತ್ರದಲ್ಲಿ ಪರಿಣಾಮಕಾರಿ ಕಾರ್ಯನಿರ್ವಹಣೆಗೆ ಕೃಷಿ ಇಲಾಖೆ ಅಧೀನದಲ್ಲಿ ಪ್ರತ್ಯೇಕ ಕೃಷಿ ಆಯುಕ್ತಾಲಯ ಸ್ಥಾಪನೆ.
- ಶಿವಮೊಗ್ಗದ ಸೋಗಾನೆ, ವಿಜಯಪುರದ ಇಟ್ಟಂಗಿಹಾಳ ಮತ್ತು ಬೆಂಗಳೂರು ಗ್ರಾಮಾಂತರದ ಪೂಜೇನಹಳ್ಳಿಯಲ್ಲಿ 'ಆಹಾರ ಪಾರ್ಕ್' ಸ್ಥಾಪನೆ.

### ತೋಟಗಾರಿಕೆ ಇಲಾಖೆ

- ತೋಟಗಾರಿಕೆ ಕುರಿತು ತಾಂತ್ರಿಕ ಸಲಹೆ, ಮಾರುಕಟ್ಟೆ ಸಂಪರ್ಕ, ಬೇಸಾಯ ಪರಿಕರಗಳು ಮತ್ತು ಉತ್ಪನ್ನಗಳನ್ನು ಒಂದೇ ಸೂರಿನಡಿ ಒದಗಿಸಲು ಆಯ್ದ ಜಿಲ್ಲೆಗಳಲ್ಲಿ 'ಕಿಸಾನ್ ಮಾಲ್' ಸ್ಥಾಪನೆ.
- ಬೆಂಗಳೂರಿನಲ್ಲಿ ಸುಸಜ್ಜಿತವಾದ 'ಅಂತರ ರಾಷ್ಟ್ರೀಯ ಮಟ್ಟದ ವಾಣಿಜ್ಯ ಪುಷ್ಪ ಮಾರುಕಟ್ಟೆ' ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪನೆ.
- ತೋಟಗಾರಿಕೆ ಬೆಳೆಗಳ ಸಂಸ್ಕರಣೆ ಮತ್ತು ರಫ್ತಿನ ಪ್ರಮಾಣ ಹೆಚ್ಚಿಸಲು ಕೊಯ್ಲೋತ್ತರ ನಿರ್ವಹಣಾ ಕೇಂದ್ರ (Packhouse) ಹಾಗೂ ಮೌಲ್ಯವರ್ಧನ ಸಂಸ್ಕರಣಾ ಘಟಕಗಳ ಸ್ಥಾಪನೆ.
- ರಾಜ್ಯದಲ್ಲಿ ಅಡಿಕೆ ಬೆಳೆಯಲ್ಲಿ ರೋಗನಿಯಂತ್ರಣಕ್ಕೆ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಸಂಶೋಧನೆ ಹಾಗೂ ಸಸ್ಯ ಸಂರಕ್ಷಣೆ ಚಟುವಟಿಕೆಗೆ ಉತ್ತೇಜನ.
- ಚಿಕ್ಕಮಗಳೂರು ಜಿಲ್ಲೆಯಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸ್ಪೈಸ್ ಪಾರ್ಕ್ (Spice Park) ಅಭಿವೃದ್ಧಿ.
- ವಿಜಯಪುರ ಜಿಲ್ಲೆಯ ಆಲಮೇಲದಲ್ಲಿ ತೋಟಗಾರಿಕೆ ಕಾಲೇಜು ಸ್ಥಾಪನೆ.



### ಪಶುಸಂಗೋಪನೆ ಇಲಾಖೆ

- ಕರ್ನಾಟಕ ರೈತ ಸಮೃದ್ಧಿ ಯೋಜನೆಯೊಂದಿಗೆ ಸಂಯೋಜಿಸಿ ಕುರಿ ಸಾಕಾಣಿಕೆ, ಹೈನುಗಾರಿಕೆ, ಹಂದಿ ಮತ್ತು ಕೋಳಿ ಸಾಕಾಣಿಕೆಗೆ ಉತ್ತೇಜನ.
- ರಾಜ್ಯದ ಆಯ್ದ 20 ತಾಲ್ಲೂಕುಗಳ ಪಶು ಆಸ್ಪತ್ರೆಗಳನ್ನು ಪಾಲಿಕ್ಲಿನಿಕ್‌ಗಳನ್ನಾಗಿ ಮೇಲ್ದರ್ಜೆಗೇರಿಸಲು 10 ಕೋಟಿ ರೂ.
- ದುಸ್ಥಿತಿಯಲ್ಲಿರುವ 200 ಪಶುವೈದ್ಯ ಸಂಸ್ಥೆಗಳಿಗೆ 100 ಕೋಟಿ ರೂ. ವೆಚ್ಚದಲ್ಲಿ ನೂತನ ಕಟ್ಟಡ ನಿರ್ಮಾಣ.
- ವಲಸೆ ಕುರಿಗಾರರ ಅಭ್ಯುದಯಕ್ಕೆ ಕ್ರಮ ಹಾಗೂ ಅವರ ಮೇಲಿನ ಶೋಷಣೆ ಮತ್ತು ದೌರ್ಜನ್ಯ ತಡೆಯಲು ಕುರಿಗಾಹಿಗಳ ಮತ್ತು ಸ್ವತ್ತುಗಳ ಮೇಲೆ ದೌರ್ಜನ್ಯ ತಡೆ ಕಾಯ್ದೆ ಜಾರಿ.
- ಪುತ್ತೂರು ಪಶುವೈದ್ಯಕೀಯ ಕಾಲೇಜು ಕಾರ್ಯಾರಂಭಕ್ಕೆ ಕ್ರಮ.

### ಮೀನುಗಾರಿಕೆ ಇಲಾಖೆ

- ಮೀನುಗಾರಿಕೆ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಮುಂದಿನ ವರ್ಷಗಳಲ್ಲಿ 3,000 ಕೋಟಿ ರೂ.ಗಳಷ್ಟು ಬೃಹತ್ ಗಾತ್ರದ ವಿವಿಧ ಯೋಜನೆಗಳ ಅನುಷ್ಠಾನ.
- ಮೀನುಗಾರರ ರಕ್ಷಣೆಗೆ ಸಮುದ್ರ ಅಂಬ್ಯುಲೆನ್ಸ್ ಖರೀದಿಗೆ 7 ಕೋಟಿ ರೂ.
- ಮತ್ಸ್ಯ ಆಶಾಕಿರಣ ಯೋಜನೆಯಡಿ ಕರಾವಳಿ ಮೀನುಗಾರರ ಪರಿಹಾರದ ರಾಜ್ಯದ ಪಾಲು 3,000 ರೂ. ಗಳಿಗೆ ಹೆಚ್ಚಳ.
- ವಿವಿಧ ವಸತಿ ಯೋಜನೆಗಳಡಿ 10,000 ವಸತಿರಹಿತ ಮೀನುಗಾರರಿಗೆ ಮನೆ ನಿರ್ಮಿಸಲು ಸಹಾಯಧನ



# ‘ಯಶಸ್ವಿನಿ’ ಯೋಜನೆ : ವಾರದೊಳಗೆ ಆಸ್ಪತ್ರೆಗಳಿಗೆ ಬಿಲ್ ಪಾವತಿ : ಕೆ.ಎನ್. ರಾಜಣ್ಣ



**ಬೆಂಗಳೂರು :** ‘ಯಶಸ್ವಿನಿ’ ಯೋಜನೆಯಡಿ ಖಾಸಗಿ ಆಸ್ಪತ್ರೆಗಳು ರೋಗಿಗಳಿಗೆ ಚಿಕಿತ್ಸೆ ನೀಡಿದ ಒಂದು ವಾರದೊಳಗೆ ಬಿಲ್ ಪಾವತಿ ಮಾಡುವ ವ್ಯವಸ್ಥೆ ಜಾರಿ ಮಾಡಲಾಗಿದೆ ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ರವರು ತಿಳಿಸಿದ್ದಾರೆ. ಈ ಹಿಂದೆ ಆಸ್ಪತ್ರೆಗಳಿಗೆ ಪಾವತಿಸಬೇಕಿದ್ದ ಸುಮಾರು ರೂ. 25 ಕೋಟಿಯಷ್ಟು ಬಾಕಿ ಉಳಿದಿತ್ತು. ಇದರಿಂದ ಖಾಸಗಿ ಆಸ್ಪತ್ರೆಗಳು ಯಶಸ್ವಿನಿ ಯೋಜನೆಯಡಿ ಚಿಕಿತ್ಸೆ ನೀಡಲು ಹಿಂದೇಟು ಹಾಕುತ್ತಿದ್ದವು. ಈಗ ಆ ಸಮಸ್ಯೆ ನಿವಾರಿಸಲಾಗಿದೆ.

ರೋಗಿಗಳಿಗೆ ಯಾವುದೇ ತೊಂದರೆ ಆಗುವುದಿಲ್ಲ ಎಂದು ಅವರು ಇತ್ತೀಚೆಗೆ ಸುದ್ದಿಗಾರರ ಜತೆ ಮಾತನಾಡಿದರು. ಅಲ್ಲದೇ, ಯಶಸ್ವಿನಿ ಯೋಜನೆಯ ಚಿಕಿತ್ಸಾ ದರವನ್ನು ಕೇಂದ್ರ ಸರ್ಕಾರದ ಆಯುಷ್ಮಾನ್ ದರಕ್ಕೆ ಸರಿ ಸಮಾನವಾಗಿ ಪರಿಷ್ಕರಿಸಲು ನಿರ್ಧರಿಸಲಾಗಿದ್ದು, ಇದಕ್ಕೆ ಖಾಸಗಿ ಆಸ್ಪತ್ರೆಗಳು ಒಪ್ಪಿಗೆ ನೀಡಿವೆ. ರಾಜ್ಯ ಸರ್ಕಾರ 15–20 ವರ್ಷಗಳಷ್ಟು ಹಿಂದೆ ದರ ನಿಗದಿ ಮಾಡಿತ್ತು. ದರವು ತುಂಬಾ ಕಡಿಮೆ ಇತ್ತು. ದರ ಪರಿಷ್ಕರಿಸುವಂತೆ ಖಾಸಗಿ ಆಸ್ಪತ್ರೆಗಳೂ ಒತ್ತಾಯ ಮಾಡಿದ್ದವು ಎಂದು ಸಚಿವ ಕೆ.ಎನ್. ರಾಜಣ್ಣರವರು ಹೇಳಿದರು. ಈ ಹಿಂದೆ ಯಶಸ್ವಿನಿ ಯೋಜನೆಯನ್ನು ನಿಲ್ಲಿಸಿದ ನಂತರ ಖಾಸಗಿ ಆಸ್ಪತ್ರೆಗಳಿಗೆ ಬಾಕಿ ಹಣ ಪಾವತಿ ಮಾಡಿರಲಿಲ್ಲ. ಇದರಿಂದ ಯೋಜನೆಯಡಿ ನೋಂದಣಿ ಮಾಡಿಕೊಳ್ಳಲು ಕೆಲವು ಆಸ್ಪತ್ರೆಗಳು ಹಿಂದೇಟು ಹಾಕಿದ್ದವು. ಈಗ ಆ ಸಮಸ್ಯೆ ಪರಿಹಾರವಾಗಿದ್ದು ರಾಜ್ಯದ ಎಲ್ಲೆಡೆ ಖಾಸಗಿ ಆಸ್ಪತ್ರೆಗಳು ಯಶಸ್ವಿನಿ ಯೋಜನೆಯಡಿ ಜನರಿಗೆ ಚಿಕಿತ್ಸೆ ನೀಡಲು ಮುಂದೆ ಬಂದಿವೆ ಎಂದರು.

## ಭಾವಪೂರ್ಣ ಶ್ರದ್ಧಾಂಜಲಿ



**ಹುಣಸೂರು :** ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರು ಹಾಗೂ ಶಾಸಕರಾದ ಶ್ರೀ ಜಿ.ಟಿ. ದೇವೇಗೌಡರ ಸಹೋದರಿ ಹಾಗೂ ಪತ್ತಿನ ಸಹಕಾರ ಮಹಾಮಂಡಳದ ಮಾಜಿ ಅಧ್ಯಕ್ಷರು ಹಾಗೂ ಹಾಲಿ ನಿರ್ದೇಶಕರಾದ ಶ್ರೀಮತಿ ಕೆ. ಲಲಿತಾ ಜಿ.ಟಿ. ದೇವೇಗೌಡ ಅವರ ಮಾತೃಶ್ರೀ ಲಕ್ಷ್ಮೀದೇವಮ್ಮ ಅವರು ಕಳೆದವಾರ ವಯೋ ಸಹಜ ಖಾಯಿಲೆಯಿಂದ ನಿಧನರಾದರು. ಶ್ರೀಯುತರ ನಿಧನಕ್ಕೆ ಸಹಕಾರ ಮಹಾಮಂಡಳದ ಆಡಳಿತ ಮಂಡಳಿ, ಪತ್ತಿನ ಮಹಾಮಂಡಳದ ಅಧ್ಯಕ್ಷರಾದ ಶ್ರೀ ವಿ. ರಾಜು ಮತ್ತು ಉಪಾಧ್ಯಕ್ಷರಾದ ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ ಹಾಗೂ ಆಡಳಿತ ಮಂಡಳಿ ನಿರ್ದೇಶಕರುಗಳು, ಅಧಿಕಾರಿ ಸಿಬ್ಬಂದಿ ವರ್ಗದವರು ಸಂತಾಪ ವ್ಯಕ್ತಪಡಿಸಿದ್ದಾರೆ.


**SAHAKARA VARTHAPATRIKE**

**Form IV**

| | | | |
|---|---|---|---|
| 1. | Place of Publication | : | Bangalore, Karnataka |
| 2. | Periodicity of its Publications | : | Monthly |
| 3. | Printers Name | : | Biligiri Printers |
| | Whether Citizen of India | | Yes |
| | If foreigner, State the country of origin | : | No.138, 2nd main, 8th cross, Chamaraj pet, |
| | Address | | Bangalore - 560018 |
| 4. | Editors Name | : | Prajwal K.N |
| | Whether Citizen of India | | Yes |
| | If foreigner, State the country of | | No.16, 1st floor, 1st cross, |
| | origin Address | | Link Road, Malleshwaram, |
| | | | Bangalore-560003 |
| 5. | Name and Address of Individuals who own | : | Karnataka state co operative |
| | The Newspaper and partners or share | : | credit societies Federation Ltd., |
| | holders holding more than percent | | No.16, 1st floor, 1st cross, |
| | of the total capital | | Link Road, Malleshwaram, |
| | | | Bangalore-560003 |

I Prajwal K.N here by declare that the particulars given are true to the best of my knowledge

Bangalore — Sd/-

29th February 2024 — Signature of the Publisher / Editor

# ಕೇಂದ್ರ ಮಧ್ಯಂತರ ಬಜೆಟ್ ಗಾತ್ರ 47.66 ಲಕ್ಷ ಕೋಟಿ ರೂ.

## ಶಿಕ್ಷಣ, ಆರೋಗ್ಯ, ಮೂಲಭೂತ ಸೌಕರ್ಯ, ಕೃಷಿ, ಮೀನುಗಾರಿಕೆ, ಹೈನುಗಾರಿಕೆ, ಖಾದ್ಯತೈಲ ಉತ್ಪಾದನೆ ಸೇರಿದಂತೆ ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ : ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್

**ನವದೆಹಲಿ :** ಫೆಬ್ರವರಿ 1 ರಂದು ನೂತನ ಸಂಸತ್ ಭವನದಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು 2024–25ನೇ ಸಾಲಿನ ಮಧ್ಯಂತರ ಬಜೆಟ್‌ನ್ನು ಪ್ರಕಟಿಸಿದರು. ಕೇಂದ್ರ ಬಜೆಟ್ ಗಾತ್ರವು 47.66 ಲಕ್ಷ ಕೋಟಿ ರೂ.ಗಳಾಗಿರುತ್ತದೆ. ಬಡವರು, ಮಹಿಳೆಯರು, ರೈತರು, ಯುವ ಜನರತ್ತ ಚಿತ್ತ ಹರಿಸಿರುವ ಕೇಂದ್ರ ಸರ್ಕಾರ 2047ರ ವೇಳೆಗೆ ದೇಶವನ್ನು ಜಗತ್ತಿನ ಅತ್ಯಂತ ಶ್ರೀಮಂತ ಮತ್ತು ವಿಕಸಿತ ದೇಶವನ್ನಾಗಿಸುವ ಸಂಕಲ್ಪವನ್ನು ಹೊಂದಲಾಗಿದೆ. ದೇಶದಲ್ಲಿ ಹೈನುಗಾರಿಕೆಗೆ ಉತ್ತೇಜನ ನೀಡಲು ಸಮಗ್ರ ಜಾರಿಗೊಳಿಸುವ ಯೋಜನೆಯನ್ನು ಬಜೆಟ್‌ನಲ್ಲಿ ಮಾಡಲಾಗಿದೆ. ಹಾಲು ಉತ್ಪಾದನೆಯಲ್ಲಿ ಭಾರತವು ವಿಶ್ವದಲ್ಲಿಯೇ ಮೊದಲ ಸ್ಥಾನದಲ್ಲಿದೆ. ಆದರೆ ಕಡಿಮೆ ಹಾಲು ನೀಡುವ ಹಸುಗಳ ಸಂಖ್ಯೆ ಹೆಚ್ಚಿದೆ. ಉತ್ಪಾದನೆ ಪ್ರಮಾಣ ಹೆಚ್ಚಿಸಲು ಕ್ರಮವಹಿಸಲಾಗುವುದು ಎಂದು ಕೇಂದ್ರ ವಿತ್ತ ಸಚಿವರು ತಿಳಿಸಿದ್ದಾರೆ. 2022–23ರ ಸಾಲಿನಲ್ಲಿ ದೇಶದಲ್ಲಿ 230 ದಶಲಕ್ಷ ಟನ್ ಹಾಲು ಉತ್ಪಾದನೆಯಾಗಿದ್ದು, ಒಟ್ಟು ಪ್ರಮಾಣ ಶೇಕಡಾ 4ರಷ್ಟು ಏರಿಕೆಯಾಗಿದೆ. ಹೊಸದಾಗಿ ಅನುಷ್ಠಾನಗೊಳ್ಳಲಿರುವ ಯೋಜನೆಗಳು ಈಗಾಗಲೇ ಜಾರಿಯಲ್ಲಿರುವ ರಾಷ್ಟ್ರೀಯ ಗೋಕುಲ ಯೋಜನೆ ಮತ್ತು ರಾಷ್ಟ್ರೀಯ ಜಾನುವಾರುಗಳ ಯೋಜನೆಗಳಿಗೆ ಪೂರಕವಾಗಿರಲಿದೆ.



ಮೀನುಗಾರರಿಗೆ ಸಹಾಯ ಮಾಡುವ ಉದ್ದೇಶದಿಂದ ಮೀನುಗಾರಿಕೆಗೆ ಪ್ರತ್ಯೇಕ ಇಲಾಖೆಯನ್ನು ಸ್ಥಾಪಿಸಿದೆ. ಮೀನುಗಾರರು, ಮೀನು ಮಾರಾಟ ಗಾರರು ಹಾಗೂ ಈ ಕ್ಷೇತ್ರದ ಉದ್ಯಮಗಳ ಚಟುವಟಿಕೆಗಳನ್ನು ಮತ್ತಷ್ಟು ಸಕ್ರಿಯಗೊಳಿಸಲಾಗುವುದು.


ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯ ಅನುಷ್ಠಾನವನ್ನು ತ್ವರಿತಗೊಳಿಸಿ, ಪ್ರತಿ ಹೆಕ್ಟೇರ್‌ಗೆ ಮತ್ಸ್ಯ ಉತ್ಪಾದನಾ ಪ್ರಮಾಣವನ್ನು 3 ಟನ್‌ಗಳಿಂದ 5 ಟನ್‌ಗಳಿಗೆ ಹೆಚ್ಚಿಸುವ ಗುರಿ ಹಾಕಿಕೊಳ್ಳಲಾಗಿದೆ ಎಂದು ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ಮುಂದಿನ ಕೆಲ ವರ್ಷಗಳಲ್ಲಿ ಸೀಫುಡ್ ರಫ್ತು ಪ್ರಮಾಣವನ್ನು ದ್ವಿಗುಣಗೊಳಿಸಿ 55 ಲಕ್ಷ ಉದ್ಯೋಗಸೃಷ್ಟಿ ಗುರಿಯನ್ನು ಹಾಕಿಕೊಳ್ಳಲಾಗಿದೆ ಎಂದು ಸಚಿವರು ತಿಳಿಸಿದರು.

ಭಾರತವು ಖಾದ್ಯತೈಲ ಉತ್ಪಾದನೆಯಲ್ಲಿ ಸ್ವಾವಲಂಬನೆ ಸಾಧಿಸಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಸರ್ಕಾರ ಕೈಗೊಳ್ಳಲಿದೆ. ಸರ್ಕಾರವು ಉತ್ಪಾದನೆಗೆ ಪೂರಕವಾದ ಕಾರ್ಯತಂತ್ರ ರೂಪಿಸಲಿದೆ. ದೇಶೀಯ ಮಟ್ಟದಲ್ಲಿ ಎಣ್ಣೆಕಾಳು ಬೀಜಗಳ ಉತ್ಪಾದನೆಗೆ ಒತ್ತುನೀಡಲಿದೆ ಎಂದು ಘೋಷಿಸಿದರು. ಕೊಯ್ಲೋತ್ತರ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಸರ್ಕಾರಿ – ಖಾಸಗಿ ಸಹಭಾಗಿತ್ವದಡಿ ಹೂಡಿಕೆಗೆ ಕ್ರಮವಹಿಸಲಿದ್ದು, ಈ ಮೂಲಕ ರೈತರ ಆದಾಯವನ್ನು ದ್ವಿಗುಣಗೊಳಿಸುವ ಗುರಿ ಹೊಂದಲಾಗಿದೆ ಎಂದು ಸಚಿವರು ತಿಳಿಸಿದರು.

2023ರಲ್ಲಿಯೇ ಎಣ್ಣೆಕಾಳುಗಳ ಉತ್ಪಾದನೆಯಲ್ಲಿ ಆತ್ಮನಿರ್ಭರ ನೀತಿಯನ್ನು ಅಳವಡಿಸಿಕೊಳ್ಳಲಾಗಿದೆ. ಹಾಗಾಗಿ ದೇಶೀಯವಾಗಿ ಸಾಸಿವೆ, ಶೇಂಗಾ, ಎಳ್ಳು, ಸೋಯಾಬಿನ್ ಮತ್ತು ಸೂರ್ಯಕಾಂತಿ ಉತ್ಪಾದನೆ ಹೆಚ್ಚಿಸಲು ಒತ್ತು ನೀಡಲಾಗಿದೆ. ಅತಿ ಹೆಚ್ಚಿನ ಇಳುವರಿ ತಳಿ, ಆಧುನಿಕ ತಂತ್ರಜ್ಞಾನ ಅಳವಡಿಕೆ, ಮಾರುಕಟ್ಟೆ ಸಂಪರ್ಕ, ಬೆಳೆಯ ಮೌಲ್ಯವರ್ಧನೆ, ಬೆಳೆ ವಿಮೆಯಂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದರು. ಎಲ್ಲಾ ಕೃಷಿ ಹವಾಮಾನ ವಲಯಗಳಲ್ಲೂ ದ್ರವರೂಪದ ನ್ಯಾನೋ ಡಿಎಪಿ ರಸಗೊಬ್ಬರವನ್ನು ಪೂರೈಸಲು ನಿರ್ಧರಿಸಲಾಗಿದೆ ಎಂದರು. ದೇಶದಲ್ಲಿ ಒಂದು ಕೋಟಿ ಮನೆಗಳ ಸೂರಿಗೆ ಸೌರಫಲಕಗಳನ್ನು ಅಳವಡಿಸಿ ವಿದ್ಯುತ್ ಉತ್ಪಾದನೆಗೆ ಆದ್ಯತೆ ನೀಡಲಾಗುವುದು. ಪ್ರತಿ ತಿಂಗಳು ಆ ಮನೆಗಳಿಗೆ 300 ಯೂನಿಟ್ ಉಚಿತ ವಿದ್ಯುತ್ ಕಲ್ಪಿಸಲಾಗುವುದು. ಇದರಿಂದ ಮನೆಗಳಿಗೆ ವಾರ್ಷಿಕ 15 ರಿಂದ 18 ಸಾವಿರ ರೂ. ಉಳಿತಾಯವಾಗಲಿದೆ. ಹೆಚ್ಚುವರಿ ವಿದ್ಯುತ್‌ನ್ನು ವಿದ್ಯುತ್ ಕಂಪನಿಗಳಿಗೆ ಮಾರಾಟ ಮಾಡಬಹುದು ಎಂದು ಸಚಿವರು ತಿಳಿಸಿದ್ದಾರೆ.

ಜನಸಂಖ್ಯೆ ತ್ವರಿತ ಏರಿಕೆ ಮತ್ತು ಜನಸಂಖ್ಯಾ ಬದಲಾವಣೆಯಿಂದ ಎದುರಾಗುವ ಸವಾಲುಗಳ ಕುರಿತು ಅಧ್ಯಯನ ನಡೆಸಿ, ಶಿಫಾರಸು ಮಾಡಲು ಉನ್ನತಮಟ್ಟದ ಸಮಿತಿಯನ್ನು ರಚಿಸಲಾಗುವುದು. ತಂತ್ರಜ್ಞಾನ ಕೌಶಲ್ಯ ಉಳ್ಳ ಯುವಕರಿಗಾಗಿ 50 ವರ್ಷ ಬಡ್ಡಿರಹಿತವಾಗಿ ಒಂದು ಲಕ್ಷ ಕೋಟಿ ರೂ. ಮೂಲನಿಧಿ ಸ್ಥಾಪನೆ ಮಾಡಿ ಈ ಮೂಲಕ ಖಾಸಗಿ ವಲಯ ಸಂಶೋಧನೆ ಕೈಗೊಳ್ಳಲು ಉತ್ತೇಜನ ನೀಡಲಾಗುವುದು ಎಂದು ತಿಳಿಸಿದರು. ಮುಂದಿನ 5 ವರ್ಷಗಳಲ್ಲಿ ಪ್ರಧಾನಮಂತ್ರಿ ಅವಾಸ್ ಯೋಜನೆಯಡಿಯಲ್ಲಿ ಹೆಚ್ಚುವರಿ 2 ಕೋಟಿ ಮನೆಗಳ ನಿರ್ಮಾಣ ಮಾಡಲಾಗುವುದು, ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕರು ಹಾಗೂ ಆಶಾಕಾರ್ಯಕರ್ತೆಯರಿಗೆ ಆಯುಶ್ಮಾನ್ ಭಾರತ್ ಯೋಜನೆಯಡಿಯಲ್ಲಿ ಹೆಚ್ಚಿನ ಆರೋಗ್ಯ ರಕ್ಷಣೆ ನೀಡಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

# ಮಹಾಶಿವರಾತ್ರಿ : ಸರ್ವಂ ಶಿವ ಮಯಂ



**ಶಿವಂ ಸುಂದರಂ**
**ಸತ್ಯಂ ಶಿವಂ**
**ಸರ್ವಂ ಶಿವಂ**
**ಸತ್ಯಂ ಶಿವಂ ಸುಂದರಂ..**
**ಓಂ ನಮಃ ಶಿವಾಯ, ಶಿವಾಯ ನಮಃ**

ಮಹಾ ಶಿವರಾತ್ರಿ (Shivaratri) ಹಿಂದೂ (Hindu) ಧರ್ಮದಲ್ಲಿ ಅತ್ಯಂತ ಮಂಗಳಕರವಾದ ಹಬ್ಬಗಳಲ್ಲಿ ಒಂದಾಗಿದೆ. ಈ ಹಬ್ಬವು ಶಿವ ಮತ್ತು ಶಕ್ತಿಯ ಸಂಗಮವನ್ನು ಸಂಕೇತ ಎನ್ನಲಾಗುತ್ತದೆ. ದೃಕ್ ಪಂಚಾಂಗದ ಪ್ರಕಾರ, ದಕ್ಷಿಣ ಭಾರತದ (South India) ಕ್ಯಾಲೆಂಡರ್ ಮಾಘ ಮಾಸದ ಕೃಷ್ಣ ಪಕ್ಷದಲ್ಲಿ ಚತುರ್ದಶಿ ತಿಥಿಯಂದು ಮಹಾ ಶಿವರಾತ್ರಿಯನ್ನು ಆಚರಿಸಿದರೆ, ಉತ್ತರ ಭಾರತದ ಕ್ಯಾಲೆಂಡರ್ ಪ್ರಕಾರ ಫಾಲ್ಗುಣ ಮಾಸದಲ್ಲಿ ಮಹಾ ಶಿವರಾತ್ರಿಯನ್ನು (Maha Shivaratri) ಆಚರಿಸುತ್ತದೆ. ಶಿವರಾತ್ರಿಯ ದಿನ ಭಕ್ತರು ದೇವಾಲಯಗಳಿಗೆ ಭೇಟಿ ನೀಡುತ್ತಾರೆ, ಶಿವ ಮತ್ತು ಪಾರ್ವತಿಯನ್ನು ಪೂಜಿಸುತ್ತಾರೆ, ಉಪವಾಸ ಆಚರಿಸಿ ಶಿವನ ಆಶೀರ್ವಾದವನ್ನು ಬೇಡುತ್ತಾರೆ. ಆದರೆ ಶಿವರಾತ್ರಿಯ ಹಿಂದಿನ ಕಥೆ ಏನು, ಈ ದಿನ ಏಕೆ ಇಷ್ಟು ಮಹತ್ವ ಎಂಬುದು ಇಲ್ಲಿದೆ.

ಒಂದು ದಂತಕಥೆಯ ಪ್ರಕಾರ ಬ್ರಹ್ಮಾಂಡದ ಸೃಷ್ಟಿಯ ಸಮಯದಲ್ಲಿ, ಶಿವನು ಮಹಾ ಶಿವರಾತ್ರಿಯ ಮಧ್ಯರಾತ್ರಿಯಲ್ಲಿ ಬ್ರಹ್ಮನ ಕೃಪೆಯಿಂದ ರುದ್ರನಾಗಿ ಅವತರಿಸುತ್ತಾನೆ. ಶಿವನು ತನ್ನ ಪತ್ನಿ ಸತಿಯ ದಹನದ ಸುದ್ದಿಯನ್ನು ಕೇಳಿದಾಗ ಸೃಷ್ಟಿ, ಸಂರಕ್ಷಣೆ ಮತ್ತು ವಿನಾಶದ ಸಂಕೇತವಾದ ಶಿವತಾಂಡವ ಮಾಡಿದ ಎನ್ನಲಾಗುತ್ತದೆ.

ಇನ್ನೊಂದು ಪಂಚಾಂಗದ ಪ್ರಕಾರ, ಸಾಗರದ ಮಂಥನದ ಸಮಯದಲ್ಲಿ ಸಮುದ್ರದಿಂದ ವಿಷವು ಹೊರಬಂದಿತು. ಅದು ಇಡೀ ಸೃಷ್ಟಿಯನ್ನು ನಾಶಮಾಡುವ ಶಕ್ತಿಯನ್ನು ಹೊಂದಿತ್ತು. ಆದರೆ, ಶಿವನು ವಿಷವನ್ನು ಕುಡಿದು ಇಡೀ ಪ್ರಪಂಚವನ್ನು ಸರ್ವನಾಶದಿಂದ ರಕ್ಷಿಸಿದ. ಆದ್ದರಿಂದ, ಬ್ರಹ್ಮಾಂಡವನ್ನು ಸಂರಕ್ಷಿಸಿದ್ದಕ್ಕಾಗಿ ಮಹಾ ಶಿವರಾತ್ರಿಯಂದು ಶಿವನ ಆರಾಧನೆ ಮಾಡುತ್ತಾರೆ.

## ಶಿವ ಪಾರ್ವತಿಯನ್ನು ಮದುವೆ ಆದ ದಿನ

ಇಷ್ಟೇ ಅಲ್ಲದೇ ಈ ಶಿವರಾತ್ರಿಯ ಅನೇಕ ಕಥೆಗಳಿದೆ. ಈ ದಿನವನ್ನು ಶಿವ ಪಾರ್ವತಿ ದೇವಿಯನ್ನು ಮದುವೆಯಾದ ದಿನ ಎನ್ನಲಾಗುತ್ತದೆ. ಇದಲ್ಲದೇ, ಭಗೀರಥನ ತಪಸ್ಸಿಗೆ ಮೆಚ್ಚಿ ಭೂಮಿಗೆ ಇಳಿದು ಬಂದ ಗಂಗೆಯ ರಭಸವನ್ನು ತಡೆಯಲು ಶಿವ ತನ್ನ ಜಡೆಯಲ್ಲಿ ಗಂಗೆಯನ್ನು ಹಿಡಿದುಕೊಳ್ಳುತ್ತಾನೆ. ಇಲ್ಲದಿದ್ದರೆ ಗಂಗೆಯ ರಭಸಕ್ಕೆ ಇಡೀ ಭೂಲೋಕ ಕೊಚ್ಚಿ ಹೋಗುತ್ತಿತ್ತು.

ಶಿವ ಗಂಗೆಯನ್ನು ಹಿಡಿದುಕೊಂಡಿದ್ದು ಕಂಡ ಭಗೀರಥ ಸ್ವಲ್ಪ ಚಿಂತೆಗೆ ಒಳಗಾಗುತ್ತಾನೆ. ಕೊನೆಗೆ ಗಂಗೆಯನ್ನು ಭೂಮಿಗೆ ಹರಿದು ಬಿಡುವಂತೆ ಶಿವನನ್ನು ಬೇಡಿಕೊಳ್ಳುತ್ತಾನೆ. ಭಗೀರಥನ ಭಕ್ತಿಗೆ ಮೆಚ್ಚಿದ ಶಿವ ತನ್ನ ಜಡೆಯಲ್ಲಿದ್ದ ಗಂಗೆಯನ್ನು ಹರಿದು ಬಿಡುತ್ತಾನೆ. ಈ ದಿನವನ್ನೇ ಪುರಾಣಗಳ ಪ್ರಕಾರ ಶಿವರಾತ್ರಿ ಹಬ್ಬ ಎಂದು ಆಚರಿಸಲಾಗುತ್ತದೆ ಎನ್ನುವ ನಂಬಿಕೆ ಸಹ ಇದೆ.

ಇದರ ಜೊತೆಗೆ, ಶಿವನ ಆದಿ ಮತ್ತು ಅಂತ್ಯ ಹುಡುಕಲು ಹೊರಟ ವಿಷ್ಣು ಹಾಗೂ ಬ್ರಹ್ಮನಿಗೆ, ಶಿವರಾತ್ರಿಯಂದು ಶಿವ ಲಿಂಗರೂಪಿಯಾಗಿ ದರ್ಶನ ನೀಡಿದ ಎಂದು ಸಹ ಹೇಳಲಾಗುತ್ತದೆ.





ಜ್ಯೋತಿಷಿಗಳ ಪ್ರಕಾರ, ಮಹಾಶಿವರಾತ್ರಿಯಂದು ಮಾಡುವ ಪೂಜೆಯು ನಮಗೆ ವಿವಿಧ ರೀತಿಯಲ್ಲಿ ಪ್ರಯೋಜನವನ್ನು ನೀಡುತ್ತದೆ. ಈ ದಿನ, ಭಗವಾನ್ ಶಿವನ ಅಭಿಷೇಕದಿಂದ ಎಲ್ಲಾ ದುಃಖ ಮತ್ತು ನೋವುಗಳನ್ನು ಮತ್ತು ಎಲ್ಲಾ ರೀತಿಯ ಭಯ ನಿವಾರಣೆಯಾಗುತ್ತದೆ ಎಂಬ ನಂಬಿಕೆ ಇದೆ.

ಈ ಮಂಗಳಕರ ದಿನದಂದು, ಶಿವ ತಾಂಡವ ಸ್ತೋತ್ರ ಮತ್ತು ಶಿವ ಚಾಲೀಸಾವನ್ನು ಪಠಿಸುವುದು ಸಹ ಮುಖ್ಯವಾಗುತ್ತದೆ ಹಾಗೂ ಈ ಮಂತ್ರಗಳ ಪಠಣದಿಂದ ಶಿವನ ರಕ್ಷೆ ಯಾವಾಗಲೂ ಭಕ್ತರ ಮೇಲೆ ಇರುತ್ತದೆ ಎಂಬುದು ನಂಬಿಕೆ. ಮಹಾದೇವನು ಈ ಅದ್ಭುತ ಸ್ತೋತ್ರಗಳನ್ನು ಪಠಿಸುವ ಮೂಲಕ ತನ್ನ ಎಲ್ಲಾ ಭಕ್ತರ ಇಷ್ಟಾರ್ಥಗಳನ್ನು ಪೂರೈಸುತ್ತಾನೆ ಎಂಬುದು ಹಿಂದಿನಿಂದಲೂ ವಾಡಿಕೆಯಲ್ಲಿರುವ ಶಾಸ್ತ್ರವಾಗಿದೆ.

### ಶಿವರಾತ್ರಿಯ ದಿನ ರಾತ್ರಿ ಪೂಜೆಯೇ ವಿಶೇಷ

ಸಾಮಾನ್ಯವಾಗಿ ಎಲ್ಲ ಹಬ್ಬಗಳಲ್ಲಿಯೂ ದೇವರಿಗೆ ಹಗಲು ಪೂಜೆ ನಡೆಯುತ್ತದೆ. ಆದರೆ ಶಿವರಾತ್ರಿ ಮಾತ್ರ ರಾತ್ರಿಯ ಹೊತ್ತು ಪೂಜೆ, ಭಜನೆ ನಡೆಸುವ ವಿಶೇಷ ಆಚರಣೆ. ರಾತ್ರಿ ಎಂದರೆ ಕತ್ತಲು, ಕತ್ತಲು ಎಂದರೆ ಅಜ್ಞಾನ. ಅಜ್ಞಾನವನ್ನು ಕಳೆದು ಸುಜ್ಞಾನ ಬೆಳಗಿಸು ಎಂದು ಆ ಶಿವನನ್ನು ಬೇಡುವ ಶುಭ ದಿನವೇ ಶಿವರಾತ್ರಿ. ಅಜ್ಞಾನ ತುಂಬಿರುವಲ್ಲಿ ಶಿವ ಸಂಚರಿಸಿ ಜ್ಞಾನ ದೀವಿಗೆಯನ್ನು ಬೆಳಗುತ್ತಾನೆ ಎಂಬ ನಂಬಿಕೆ ಇದೆ.

ಶಿವನಿಗೆ ಅತೀ ಶ್ರೇಷ್ಠವಾಗಿರುವ ಬಿಲ್ವ ಪತ್ರೆಯನ್ನು ಅರ್ಪಿಸಿ, ತಿಲಗಿ ಪುಷ್ಪ, ತುಳಸಿಯಿಂದ ಶಿವಲಿಂಗವನ್ನು ಅಲಂಕಾರ ಮಾಡಿ ಶಿವನ್ನು ಭಜಿಸಿದರೆ, ಪಾಪಗಳು ಪರಿಹಾರವಾಗುತ್ತವೆ, ಮೋಡಗಳೇ ಇಲ್ಲದ ಶುಭ್ರ ಆಕಾಶದಲ್ಲಿ ಬಂದಿರುವ ಚಂದ್ರನ ಬೆಳಕಿನಲ್ಲಿ ಶಿವನಿಗೆ ಅಭಿಷೇಕ ಮಾಡಿ ಆರಾಧಿಸಿದರೆ ಅತ್ಯಂತ್ರ ಶ್ರೇಷ್ಠ ಎಂಬ ನಂಬಿಕೆಗಳಿವೆ. ಶಿವರಾತ್ರಿಯ ದಿನವಿಡೀ ಉಪವಾಸ ಮಾಡಿ, ಜಾಗರಣೆ ಮಾಡಿ ಶಿವನನ್ನು ಆರಾಧಿಸಿದರೆ ಸಕಲ ಪಾಪಗಳೂ ಕಳೆಯುತ್ತವೆ ಎಂದು ನಂಬಲಾಗಿದೆ.

ಎಲ್ಲಾ ಜೀವರಾಶಿಗಳನ್ನು ಪೊರೆಯುವ ಶಿವ ಎಲ್ಲಾ ಆಡಂಬರಗಳಿಂದ ಮುಕ್ತ. ಆತ ಆಭರಣಪ್ರಿಯನಲ್ಲ, ಅಲಂಕಾರ ಪ್ರಿಯನೂ ಅಲ್ಲ. ಭಸ್ಮವನ್ನು ಬಳಿದುಕೊಂಡು, ಹುಲಿಯ ಚರ್ಮವನ್ನು ಉಟ್ಟು, ಸ್ಮಶಾನದಲ್ಲಿರುವ ಸರಳ ಮತ್ತು ಅಮೋಘ ಶಕ್ತಿ.

ಶಿವನು ಸರಳತೆ, ಪ್ರಾಮಾಣಿಕತೆ ಮತ್ತು ನಿಷ್ಕಲ್ಮಶ ಮನಸ್ಸುಗಳ ಪ್ರತೀಕ. ಥಳಬಿಡದ ಸಾಧನೆಯ ದ್ಯೋತಕ. ಧ್ಯಾನಪ್ರಿಯ ಶಿವ ಭಕ್ತರಿಂದ ಬಯಸುವುದು ನಿಶ್ಕಲ್ಮಶ ಮತ್ತು ಪ್ರಾಮಾಣಿಕ ಭಕ್ತಿ ಮಾತ್ರ. ತೋರಿಕೆಯ ಮತ್ತು ಆಡಂಬರದ ಪೂಜೆಯನ್ನು ಬಯಸದ ಮಹಾದೇವನನ್ನು ಇಂದ್ರಿಯ ನಿಗ್ರಹ, ಧ್ಯಾನ, ಸಂಯಮ ಮತ್ತು ವಿಶ್ವಾಸ ಭರಿತರಾಗಿ ಶಿವರಾತ್ರಿಯಂದು ಧ್ಯಾನಿಸಿದರೆ ಆತ ಪ್ರಸನ್ನಗೊಳ್ಳುತ್ತಾನೆ.

### ಮಹಾಶಿವರಾತ್ರಿಯ ಉಪವಾಸ ಮತ್ತು ಜಾಗರಣೆಯ ಮಹತ್ವ

ಪ್ರತಿ ವರ್ಷದ ಶಿವರಾತ್ರಿಯ ಸಮಯದಲ್ಲಿ ಶಿವನು, ಪಾರ್ವತಿಯ ಜೊತೆಯಲ್ಲಿ ಭೂಮಿಗೆ ಆಗಮಿಸುತ್ತಾನೆ.. ಭೂ-ಸಂಚಾರ ಮಾಡುತ್ತಾನೆ.. ಎಲ್ಲ ಸ್ಥಾವರ ಜಂಗಮ ಲಿಂಗಗಳಲ್ಲಿ ಸಂಕ್ರಮಣಗೊಳ್ಳುತ್ತಾನೆ.. ಹೀಗಾಗಿ ಶಿವರಾತ್ರಿಯಂದು ಶಿವನನ್ನು ಯಾರು ಪೂಜಿಸುವರೋ ಅವರ ಪಾಪಗಳು ಪರಿಹಾರವಾಗುತ್ತವೆ ಎಂದು ಸ್ವತಃ ಶಿವನೇ ತಿಳಿಸಿದ್ದಾನೆ ಎಂಬುದರ ಬಗ್ಗೆ ಶಾಸ್ತ್ರೋಕ್ತಿ ಇದೆ.

**– ಸವಿತಾ ನಾಯ್ಕ್, ಬೆಂಗಳೂರು.**

## ಸಹಕಾರ ಸಂಘಗಳ ನೇರ ನೇಮಕಾತಿ : ಲಿಖಿತ ಪರೀಕ್ಷೆ, ಮೌಲ್ಯಮಾಪನ ಕಾರ್ಯಕ್ಕೆ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಫಾರ್ ರೂರಲ್ ಬ್ಯಾಂಕಿಂಗ್ ಸಂಸ್ಥೆಗೆ ಅನುಮತಿ

**ಬೆಂಗಳೂರು :** ಸಹಕಾರ ಸಂಘಗಳ ನಿಯಮಾವಳಿ 17 ಹಾಗೂ 18ರಡಿ ಸಹಕಾರ ಸಂಘಗಳಲ್ಲಿ ಸಿಬ್ಬಂದಿ ನೇಮಕಾತಿಗಾಗಿ ಲಿಖಿತ ಪರೀಕ್ಷೆ, ಮೌಲ್ಯಮಾಪನ ಕಾರ್ಯಕ್ಕೆ ಹಲವು ಸಂಸ್ಥೆಗಳಿಗೆ ಅನುಮತಿ ನೀಡಲಾಗಿದೆ. ಅಂತಹ ಅನುಮತಿ ನೀಡಿರುವ ಪಟ್ಟಿಯಲ್ಲಿ ಬೆಂಗಳೂರಿನ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಫಾರ್ ರೂರಲ್ ಬ್ಯಾಂಕಿಂಗ್ ಸಂಸ್ಥೆಯನ್ನು ಸೇರಿಸಿ ಸಹಕಾರ ಸಂಘಗಳ ನಿಬಂಧಕರು ಸುತ್ತೋಲೆ ಹೊರಡಿಸಿದ್ದಾರೆ. ಸುತ್ತೋಲೆ ಸಂಖ್ಯೆ: ಆರ್‌ಸಿಎಸ್/ಆರ್‌ಎಸ್‌ಆರ್/ ಎಕ್ಸ್‌ಎಂಸಿ/41/2023-24, ದಿನಾಂಕ : 3-2-2024ನ್ನು ನೋಡಬಹುದು.

# ಗೋಕಾಕ್‌ನಲ್ಲಿ ಪತ್ತಿನ ಸಂಘಗಳ ಶಿಕ್ಷಣ ಕಾರ್ಯಾಗಾರ



**ಗೋಕಾಕ್ :** ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ವತಿಯಿಂದ ದಿನಾಂಕ:06.02.2024ರಂದು ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಉತ್ತರ ಕನ್ನಡ ಜಿಲ್ಲೆ ವ್ಯಾಪ್ತಿಗೊಳಪಡುವ ಪತ್ತಿನ ಸಹಕಾರ ಸಂಘಗಳ ಆಡಳಿತಮಂಡಳಿ ನಿರ್ದೇಶಕರು, ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ಕಾರ್ಯಾಗಾರವನ್ನು ಗೋಕಾಕ್ ನಲ್ಲಿ ಏರ್ಪಡಿಸಲಾಗಿತ್ತು.

ಮಹಾಮಂಡಳದ ಅಧ್ಯಕ್ಷರಾದ ಶ್ರೀ ವಿ.ರಾಜುರವರು ಉದ್ಘಾಟನೆಯನ್ನು ನೆರವೇರಿಸಿದರು. ನಂತರ ಮಾತನಾಡಿದ ಅವರು ರಾಜ್ಯದಲ್ಲಿ ಪತ್ತಿನ ಸಹಕಾರ ಸಂಘಗಳು ಪರಿಣಾಮಕಾರಿಯಾಗಿ ಸದಸ್ಯ ಸೇವೆಗಳನ್ನು ಸಲ್ಲಿಸುತ್ತಿವೆ. ಮುಂಬರುವ ದಿನಗಳಲ್ಲಿ ಹೆಚ್ಚು ಸಹಕಾರ ಸಂಘಗಳು ಸ್ಥಾಪನೆಯಾಗಿ ಸೇವೆಗಳನ್ನು ಒದಗಿಸುವ ಮೂಲಕ ಚಳುವಳಿಯನ್ನು ಬಲಪಡಿಸಬೇಕು ಎಂದರು. ಮಹಾಮಂಡಳದಲ್ಲಿ 2176 ಸಹಕಾರ ಸಂಘಗಳು ಸದಸ್ಯತ್ವ ಪಡೆದಿದ್ದು 1800ಕ್ಕೂ ಹೆಚ್ಚು ಇ–ಸ್ಟಾಂಪಿಂಗ್ ಕೇಂದ್ರಗಳನ್ನು ರಾಜ್ಯಾದ್ಯಂತ ಹೊಂದಿದೆ. ಸಹಕಾರ ಸಂಘಗಳು ಮಹಾಮಂಡಳದಲ್ಲಿ ಸದಸ್ಯತ್ವ ಪಡೆದು ಮಹಾಮಂಡಳ ನೀಡುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದರು. ಮುಖ್ಯ ಅತಿಥಿಗಳಾಗಿ ಮಹಾಮಂಡಳದ ನಿರ್ದೇಶಕರಾದ ಶ್ರೀ ಸಂಜಯ ಪಿ ಹೊಸಮಠ, ಶ್ರೀ ತಮ್ಮಣ್ಣ ಬಾಲಪ್ಪ ಕೆಂಚರಡ್ಡಿ, ಶ್ರೀ ಉಮೇಶ್ ಶಿ ಬಾಳಿ, ಡಾ॥ಸುರೇಶ್ ಗೌಡ ಪಾಟೀಲ್, ಸಹಕಾರ ಸಂಘಗಳ ಸಂಯುಕ್ತ ನಿಬಂಧಕರು, ಬೆಳಗಾವಿ ಪ್ರಾಂತ, ಶ್ರೀ ಬಸಗೌಡ ಪಾಟೀಲ್, ಅಧ್ಯಕ್ಷರು, ಬೆಳಗಾವಿ ಜಿಲ್ಲಾ ಯೂನಿಯನ್, ಶ್ರೀಮತಿ ಶಾಹಿನ್ ಅಕ್ತರ್, ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಬೈಲಹೊಂಗಲ ಬೆಳಗಾವಿ ಜಿಲ್ಲೆ, ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಪ್ರಜ್ವಲ್ ಕೆ.ಎನ್. ರವರು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು. ನಿರ್ದೇಶಕರಾದ ಶ್ರೀ ಉಮೇಶ್ ಶಿ ಬಾಳಿರವರು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಎಲ್ಲಾ ಗಣ್ಯರನ್ನು ಮಹಾಮಂಡಳದ ನಿರ್ದೇಶಕರಾದ ಶ್ರೀ ತಮ್ಮಣ್ಣ ಬಾಲಪ್ಪ ಕೆಂಚರಡ್ಡಿ ಸ್ವಾಗತಿಸಿದರು.

ಡಾ॥ ಸುರೇಶ್ ಗೌಡ ಪಾಟೀಲ್, ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಳಗಾವಿ ಪ್ರಾಂತ ಇವರು ಪತ್ತಿನ ಸಹಕಾರ ಸಂಘಗಳ ಕಾರ್ಯನಿರ್ವಹಣೆ ಹಾಗೂ ಸಾಲ ವಸೂಲಾತಿ ಕುರಿತು, ಶ್ರೀ ವೈ.ವಿ ಗುಂಡುರಾವ್, ಸಹಾಯಕ ಮುಖ್ಯ ವ್ಯವಸ್ಥಾಪಕರು, ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್, ಇವರು ಪತ್ತಿನ ಸಹಕಾರ ಸಂಘಗಳ ಸಬಲೀಕರಣ ಮತ್ತು ಒತ್ತಡ ಹಾಗೂ ಸಮಯ ನಿರ್ವಹಣೆ ಬಗ್ಗೆ, ಶ್ರೀ ಅನಿಲ್ ಭಾರಧ್ವಾಜ್, ಸನ್ನದು ಲೆಕ್ಕಪರಿಶೋಧಕರು ಇವರು ಸಹಕಾರ ಸಂಘಗಳಲ್ಲಿ ಆದಾಯ ತೆರಿಗೆ ಹಾಗೂ ಸರಕು ಮತ್ತು ಸೇವಾ ತೆರಿಗೆಯ ಇತ್ತೀಚಿನ ಬದಲಾವಣೆ ಕುರಿತು ಉಪನ್ಯಾಸ ನೀಡಿದರು. ಈ ಕಾರ್ಯಾಗಾರದಲ್ಲಿ ಸಹಕಾರ ಸಂಘಗಳ 300 ಪ್ರತಿನಿಧಿಗಳು ಹಾಜರಿದ್ದರು. ಕೊನೆಯಲ್ಲಿ ಕಾರ್ಯಕ್ರಮದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.



# ತುಮಕೂರಿನಲ್ಲಿ ಪತ್ತಿನ ಸಂಘಗಳ ಶಿಕ್ಷಣ ಕಾರ್ಯಾಗಾರ



**ತುಮಕೂರು :** ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ವತಿಯಿಂದ ದಿನಾಂಕ : 27.02.2024ರಂದು ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ, ತುಮಕೂರು, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆ ವ್ಯಾಪ್ತಿಗೊಳಪಡುವ ಪತ್ತಿನ ಸಹಕಾರ ಸಂಘಗಳ ಆಡಳಿತಮಂಡಳಿ ನಿರ್ದೇಶಕರು, ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ಕಾರ್ಯಾಗಾರವನ್ನು ತುಮಕೂರಿನಲ್ಲಿ ಏರ್ಪಡಿಸಲಾಗಿತ್ತು.

ಮಹಾಮಂಡಳದ ಅಧ್ಯಕ್ಷರಾದ ಶ್ರೀ ವಿ.ರಾಜುರವರು ಅಧ್ಯಕ್ಷತೆಯನ್ನು ವಹಿಸಿದ್ದರು. ಶ್ರೀ ಮೂರ್ತಿ.ಹೆಚ್, ಸಹಕಾರ ಸಂಘಗಳ ಉಪ ನಿಬಂಧಕರು, ಇವರು ಉದ್ಘಾಟನೆಯನ್ನು ನೆರವೇರಿಸಿದರು. ಮುಖ್ಯ ಅತಿಥಿಗಳಾಗಿ ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ಜಿ.ಮಲ್ಲಿಕಾರ್ಜುನಯ್ಯ, ಶ್ರೀ ಡಿ.ಆರ್.ನಾಗೇಶಪ್ಪ, ಶ್ರೀಮತಿ ಅಶ್ವಿನಿ ಮಾರುತಿ ಕ.ಆ.ಸೇ. ತಹಸೀಲ್ದಾರರು ಹಾಗೂ ವಿಶೇಷ ಭೂ ಸ್ವಾಧೀನಾಧಿಕಾರಿ,ತುಮಕೂರು ಜಿಲ್ಲೆ,ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಪ್ರಜ್ವಲ್ ಕೆ.ಎನ್. ರವರುಗಳು ಭಾಗವಹಿಸಿದ್ದರು.

ಶ್ರೀಮತಿ ಸುವರ್ಣ ಶಿವಾನಂದ ರವರು ಪ್ರಾರ್ಥನೆ ಮಾಡಿದರು. ನಿರ್ದೇಶಕರಾದ ಶ್ರೀ ಜಿ.ಮಲ್ಲಿಕಾರ್ಜುನಯ್ಯರವರು ಎಲ್ಲಾ ಗಣ್ಯರನ್ನು ಹಾಗೂ ಸದಸ್ಯ ಸಹಕಾರ ಸಂಘಗಳ ಪ್ರತಿನಿಧಿಗಳನ್ನು ಸ್ವಾಗತಿಸಿದರು. ಅಧ್ಯಕ್ಷರು ಮಾತನಾಡಿ ಮಹಾಮಂಡಳವು 2004ರಲ್ಲಿ ಕೃಷಿಯೇತರ ಪತ್ತಿನ ಸಹಕಾರ ಸಂಘಗಳ ಶ್ರೇಯೋಭಿವೃದ್ಧಿಗಾಗಿ ಸ್ಥಾಪನೆಗೊಂಡು ಕಾರ್ಯನಿರ್ವಹಿಸುತ್ತಾ ಬಂದಿದೆ. ರಾಷ್ಟ್ರಮಟ್ಟದಲ್ಲಿ ರಾಜ್ಯಮಟ್ಟದಲ್ಲಿ ಸಹಕಾರ ಚಳುವಳಿಯ ಬೆಳವಣಿಗೆಗೆ ನಾಂದಿ ಹಾಡಿದ ಸಹಕಾರಿ ಪಿತಾಮಹರುಗಳನ್ನು, ಸಹಕಾರಿಗಳನ್ನು ಸ್ಮರಣೆ ಮಾಡುವುದು ಮುಖ್ಯ



13ನೇ ಪುಟಕ್ಕೆ...

...13ನೇ ಪುಟದಿಂದ

ಅಂಶವಾಗಿದೆ. ಭಾರತದಲ್ಲಿ ಸಹಕಾರಿ ಚಳುವಳಿ ಪ್ರಾರಭವಾಗಿ 119 ವರ್ಷ ಕಳೆದಿದೆ. ದೇಶದಲ್ಲಿ30 ಕೋಟಿಗೂ ಹೆಚ್ಚು ಸದಸ್ಯತ್ವ ಹೊಂದಿರುವ ಕ್ಷೇತ್ರ ಸಹಕಾರಿ ಕ್ಷೇತ್ರವಾಗಿದೆ. ಭಾರತದ ಆರ್ಥಿಕ ಅಭಿವೃದ್ಧಿಯಲ್ಲಿ ಸಹಕಾರ ಕ್ಷೇತ್ರದ ಸೇವೆ ಅತ್ಯಂತ ದೊಡ್ಡದು.

ಭಾರತವು ಆರ್ಥಿಕ ಅಭಿವೃದ್ಧಿ ವಲಯದಲ್ಲಿ 3ನೇ ಸ್ಥಾನದಲ್ಲಿದೆ. ಮಹಾಮಂಡಳದ ಉದ್ದೇಶ ಪತ್ತಿನ ಸಹಕಾರ ಸಂಘಗಳ ಕಾರ್ಯ ಚಟುವಟಿಕೆಗಳನ್ನು ಪ್ರೋತ್ಸಾಹಿಸುವುದು ತರಬೇತಿ ಕಾರ್ಯಕ್ರಮಗಳ ಮೂಲಕ ಮಾರ್ಗದರ್ಶನ ನೀಡುವುದಾಗಿರುತ್ತದೆ.

ಮಹಾಮಂಡಳದಲ್ಲಿ 2176 ಸಹಕಾರ ಸಂಘಗಳು ಸದಸ್ಯತ್ವ ಪಡೆದಿದ್ದು 1800ಕ್ಕೂ ಹೆಚ್ಚು ಇ–ಸ್ಟಾಂಪಿಂಗ್ ಕೇಂದ್ರಗಳನ್ನು ರಾಜ್ಯಾದ್ಯಂತ ಹೊಂದಿದೆ. ಸಹಕಾರ ಸಂಘಗಳು ಮಹಾಮಂಡಳದಲ್ಲಿ ಸದಸ್ಯತ್ವ ಪಡೆದು ಮಹಾಮಂಡಳ ನೀಡುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದರು. ಶ್ರೀಮತಿ ಅಶ್ವಿನಿ ಮಾರುತಿ ಕ.ಆ.ಸೇ. ತಹಸೀಲ್ದಾರರು ಹಾಗೂ ವಿಶೇಷ ಭೂ ಸ್ವಾಧೀನಾಧಿಕಾರಿ, ತುಮಕೂರು ಜಿಲ್ಲೆ ರವರು ಮಾತನಾಡಿ ಮಹಾಮಂಡಳದ ಶೈಕ್ಷಣಿಕ ಕಾರ್ಯಕ್ರಮಗಳಲ್ಲಿ ಮಹಿಳೆಯರು ಭಾಗವಹಿಸುವಂತೆ ತಿಳಿಸಿ ಉತ್ತಮವಾಗಿ ಕಾರ್ಯನಿರ್ವಹಿಸಲು ಅನುಕೂಲವಾಗುತ್ತದೆ ಎಂದರು.

ಶ್ರೀ ಸತೀಶ್ ಕುಮಾರ್ ಕೃಷ್ಣ, ಕ್ಷೇತ್ರದ ವ್ಯವಸ್ಥಾಪಕರು, ಸ್ಟಾಕ್ ಹೋಲ್ಡಿಂಗ್ ಕಾರ್ಪೊರೇಷನ್ ಆಫ್ ಇಂಡಿಯಾ ಲಿ., ಬೆಂಗಳೂರು ಇವರು ಇ–ಸ್ಟಾಂಪಿಂಗ್ ಸ್ಟ್ಯಾಂಪ್ ಡ್ಯೂಟಿಯಲ್ಲಿ ಇತ್ತೀಚೆಗೆ ಆಗಿರುವ ಬದಲಾವಣೆಗಳ ಬಗ್ಗೆ ಉಪನ್ಯಾಸ, ಶ್ರೀ ವೈ.ವಿ ಗುಂಡುರಾವ್, ಸಹಾಯಕ ಮುಖ್ಯ ವ್ಯವಸ್ಥಾಪಕರು, ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್, ಇವರು ಪತ್ತಿನ ಸಹಕಾರ ಸಂಘಗಳ ಸಬಲೀಕರಣ ಮತ್ತು ಒತ್ತಡ ಹಾಗೂ ಸಮಯ ನಿರ್ವಹಣೆ ಬಗ್ಗೆ, ಶ್ರೀ ಅನಿಲ್ ಭಾರಧ್ವಾಜ್, ಸನ್ನದು ಲೆಕ್ಕಪರಿಶೋಧಕರು ಇವರು ಸಹಕಾರ ಸಂಘಗಳಲ್ಲಿ ಆದಾಯ ತೆರಿಗೆ ಹಾಗೂ ಸರಕು ಮತ್ತು ಸೇವಾ ತೆರಿಗೆಯ ಇತ್ತೀಚಿನ ಬದಲಾವಣೆ ಕುರಿತು ಉಪನ್ಯಾಸ ನೀಡಿದರು. ಈ ಕಾರ್ಯಾಗಾರದಲ್ಲಿ ಹಾಜರಿದ್ದ ಸಹಕಾರ ಸಂಘಗಳ ಪ್ರತಿನಿಧಿಗಳು ಕಾರ್ಯಕ್ರಮದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2023–24ನೇ ಸಾಲಿಗೆ ಸಹಕಾರಿಗಳಿಗಾಗಿ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯಡಿ ಹೊಸ ಸದಸ್ಯರನ್ನು ನೋಂದಾಯಿಸುವ ಅವಧಿಯನ್ನು ದಿನಾಂಕ : 31.03.2024ರವರೆಗೆ ವಿಸ್ತರಿಸುವ ಬಗ್ಗೆ.

ಉಲ್ಲೇಖ : 1. ಸರ್ಕಾರದ ಆದೇಶ ಸಂಖ್ಯೆ:ಸಿಒ205 ಸಿಎಲ್ಎಸ್ 2023 ದಿನಾಂಕ : 06.11.2023 ಹಾಗೂ ತಿದ್ದುಪಡಿ ಆದೇಶ ದಿ:29.11.2023

2. ಯಶಸ್ವಿನಿ ಟ್ರಸ್ಟ್ ಇವರ ಕಡತ ಸಂಖ್ಯೆ ಯಶಸ್ವಿನಿ/104/ಸಿಡಬ್ಲ್ಯೂ/2/ವಿಸ್ತರಣೆ ಆದೇಶ/2024

### ಪ್ರಸ್ತಾವನೆ

ಮೇಲೆ ಓದಲಾದ ಕ್ರ.ಸಂ(1)ರ ಸರ್ಕಾರದ ಆದೇಶದಲ್ಲಿ 2023–24ನೇ ಸಾಲಿಗೆ ಸಹಕಾರಿಗಳಿಗಾಗಿ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯಡಿ ಹೊಸ ಸದಸ್ಯರನ್ನು ನೋಂದಾಯಿಸುವ ಅವಧಿಯನ್ನು ದಿನಾಂಕ : 01.01.2024 ರಿಂದ ದಿನಾಂಕ : 28.02.2024ರವರೆಗೆ ಮುಂದುವರೆಸಲಾಗಿತ್ತು. ಮೇಲೆ ಓದಲಾದ ಕ್ರ.ಸಂ.(2) ಯಶಸ್ವಿನಿ ಯೋಜನೆಯು ಒಂದು ಜನಪ್ರಿಯ ಯೋಜನೆಯಾಗಿದ್ದು ಈ ಯೋಜನೆಯು ಹೆಚ್ಚಿನ ಸಂಖ್ಯೆಯ ಸಹಕಾರಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಈ ಯೋಜನೆಯಡಿ ಇನ್ನೂ ಹೆಚ್ಚಿನ ಸದಸ್ಯರನ್ನು ನೋಂದಾಯಿಸಿಕೊಳ್ಳಲು ಅನುವಾಗುವಂತೆ ನೋಂದಣಿ ಅವಧಿಯನ್ನು ದಿ : 31.03.2024 ರವರೆಗೆ ವಿಸ್ತರಿಸುವಂತೆ ಕೋರಿರುತ್ತಾರೆ.

ಆದುದರಿಂದ ಯಶಸ್ವಿನಿ ಯೋಜನೆಯಡಿ ಸೌಲಭ್ಯಗಳನ್ನು ಪಡೆಯಲು ಸಹಕಾರಿಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ಸದಸ್ಯತ್ವ ನೋಂದಣಿ ಅವಧಿಯನ್ನು ದಿನಾಂಕ : 29.02.2024ರಿಂದ ದಿನಾಂಕ : 31.03.2024ರವರೆಗೆ ವಿಸ್ತರಿಸಲು ತೀರ್ಮಾನಿಸಿ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಸಿಒ 205 ಸಿಎಲ್ಎಸ್2023 ದಿನಾಂಕ : 29.02.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2023–24ನೇ ಸಾಲಿಗೆ ಸಹಕಾರಿಗಳಿಗಾಗಿ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯಡಿ ಹೊಸ ಸದಸ್ಯರನ್ನು ನೋಂದಾಯಿಸುವ ಅವಧಿಯನ್ನು **ದಿನಾಂಕ : 29.02.2024ರಿಂದ ದಿನಾಂಕ : 31.03.2024ರವರೆಗೆ ವಿಸ್ತರಿಸಿ ಆದೇಶಿಸಿದೆ.**

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**
**(ರಂಗನಾಥ.ಜಿ)**
**ಸರ್ಕಾರದ ಅಧೀನ ಕಾರ್ಯದರ್ಶಿ–3**
**ಸಹಕಾರ ಇಲಾಖೆ**

# ತಂತ್ರಜ್ಞಾನ ಆಧಾರಿತ ಆಡಳಿತದಿಂದ ಸಹಕಾರ ಚಳವಳಿಯ ಬೆಳವಣಿಗೆ ಸಾಧ್ಯ : ಸಚಿವ ಸಂತೋಷ್ ಎಸ್. ಲಾಡ್



**ಹುಬ್ಬಳ್ಳಿ :** ಸಹಕಾರ ಸಂಘಗಳಲ್ಲಿ ವೈಜ್ಞಾನಿಕ ನಿರ್ವಹಣೆ, ತಂತ್ರಜ್ಞಾನದ ಅಳವಡಿಕೆ, ವೃತ್ತಿಪರರ ಅಗತ್ಯವಿದೆ. ಕಾನೂನು ಮತ್ತು ನಿಯಂತ್ರಣ, ಹಣಕಾಸು ನಿರ್ವಹಣಾ ಸಮಸ್ಯೆ, ಸಾಮೂಹಿಕ ನಾಯಕತ್ವ ಕೊರತೆ ಮತ್ತಿತರ ಪ್ರಮುಖ ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡಲ್ಲಿ ಸಹಕಾರ ಸಂಘಗಳ ಸರ್ವಾಂಗೀಣ ಅಭಿವೃದ್ಧಿ ಸಾಧ್ಯ ಎಂದು ಕಾರ್ಮಿಕ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ತಿಳಿಸಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ, ಧಾರವಾಡ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಸಹಕಾರ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಬೆಳಗಾವಿ ವಿಭಾಗದ ಆಯ್ದ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ಹಮ್ಮಿಕೊಳ್ಳಲಾದ ರಾಜ್ಯ ಮಟ್ಟದ ಸಹಕಾರ ತರಬೇತಿ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಸ್. ನವೀನ್‌ರವರು ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ರಾಜ್ಯದಲ್ಲಿ 46 ಸಾವಿರಕ್ಕು ಹೆಚ್ಚು ಸಹಕಾರ ಸಂಘಗಳಿದ್ದು ಈ ಸಂಘಗಳಿಗೆ ರಾಜ್ಯ ಸಹಕಾರ ಮಹಾಮಂಡಳವು 30 ಜಿಲ್ಲಾ ಸಹಕಾರ ಯೂನಿಯನ್‌ಗಳ ಮೂಲಕ ಆಡಳಿತ ಮಂಡಳಿ ನಿರ್ದೇಶಕರುಗಳಿಗೆ, ವ್ಯವಸ್ಥಾಪಕರುಗಳಿಗೆ ಸಂಘದ ಸದಸ್ಯರುಗಳಿಗೆ ಮಹಿಳಾ, ಅಲ್ಪಸಂಖ್ಯಾತರು, ಯುವಕರಿಗೆ, ಲ್ಯಾಂಪ್ಸ್ ಸಹಕಾರ ಸಂಘಗಳ ಅಭಿವೃದ್ಧಿಗೆ ವಿಷಯ ತಜ್ಞರುಗಳಿಂದ ಅವಶ್ಯಕ ತರಬೇತಿಗಳನ್ನು ನೀಡುವುದರ ಮೂಲಕ ಸಹಕಾರ ಚಳವಳಿಯನ್ನು ಬಲಪಡಿಸುವ ಕಾರ್ಯವನ್ನು ಮಾಡುತ್ತಿದೆ ಎಂದರು.

ರಾಜ್ಯದ 8 ತರಬೇತಿ ಕೇಂದ್ರಗಳಲ್ಲಿ ರೆಗ್ಯೂಲರ್ ಹಾಗೂ ದೂರಶಿಕ್ಷಣದ ಮೂಲಕ "ಡಿಪ್ಲೊಮಾ & ಕೋ–ಆಪ್‌ರೇಟಿವ್ ಮ್ಯಾನೇಜಮೆಂಟ್" ತರಬೇತಿಯನ್ನು ರಾಜ್ಯದ ಎಲ್ಲಾ ರೀತಿಯ ಸಹಕಾರ ಸಂಘಗಳ ಸಿಬ್ಬಂದಿಗಳಿಗೆ ನೀಡುತ್ತಾ ಬಂದಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರಾದ ಬಾಪುಗೌಡ ಡಿ. ಪಾಟೀಲ ಮಾತನಾಡುತ್ತಾ, ದಾವಾ ತೀರ್ಪು/ಆದೇಶ, ಅಮಲ್ಜಾರಿ, ಗಾರ್ನಿಶಿ ಆದೇಶ, ಖಾತೆ ತಡೆಹಿಡಿಯುವುದು ಈ ವಿಷಯಗಳನ್ನೊಳಗೊಂಡು ಸಹಕಾರ ಸಂಘಗಳಲ್ಲಿ ಸದಸ್ಯರು ಪಡೆದ ಸಾಲವನ್ನು ಹಿಂಪಡೆಯದೇ ಇರುವಾಗ ಈ ಕಾನೂನಾತ್ಮಕ ವಿಷಯಗಳಿಂದ ಸಾಲ ವಸೂಲಾತಿ ಸರಳವಾಗುವುದು. ಎನ್‌ಪಿಎ ಪ್ರಮಾಣ ಕಡಿಮೆ ಮಾಡುವುದರ ಮೂಲಕ ಸಂಘಗಳ ಆರ್ಥಿಕ ಅಭಿವೃದ್ಧಿಯತ್ತ ಆಡಳಿತ ಮಂಡಳಿಯವರು ಹಾಗೂ ಸಿಬ್ಬಂದಿ ವರ್ಗದವರು ಶ್ರಮವಹಿಸಬೇಕೆಂದು ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಅಧ್ಯಕ್ಷರಾದ ವಿ. ರಾಜುರವರು ಮಾತನಾಡುತ್ತಾ, ಇತ್ತೀಚಿನ ದಿನಗಳಲ್ಲಿ ಪತ್ತಿನ ಸಹಕಾರ ಸಂಘಗಳು ಆದಾಯ ತೆರಿಗೆ ಸೇರಿದಂತೆ ಹಲವು ಪ್ರಮುಖ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಪತ್ತಿನ ಸಹಕಾರ ಚಳವಳಿ ಬಲಿಷ್ಠವಾಗಿ ಬೆಳೆಯಲು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಅಗತ್ಯ ನೆರವು ನೀಡುತ್ತಿವೆ ಎಂದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕರು ಹಾಗೂ ಹಾವೇರಿ ಹಾಲು ಒಕ್ಕೂಟದ ಅಧ್ಯಕ್ಷರಾದ ಬಸವರಾಜ ಅರಬಗೊಂಡರವರು ಮಾತನಾಡುತ್ತಾ, ಸಂಘಗಳು ಗ್ರಾಹಕರ ಸೇವೆಯನ್ನು ಸಂತೃಪ್ತಿಯಾಗಿ ಮಾಡಬೇಕು. ಜಾಗತೀಕರಣ ಪ್ರಕ್ರಿಯೆಯ ಬಳಿಕ ಖಾಸಗಿ ವ್ಯವಸ್ಥೆ ನಮ್ಮೊಂದಿಗೆ ಪೈಪೋಟಿಗೆ ಇಳಿದಿವೆ. ಇಂತಹ

15ನೇ ಪುಟಕ್ಕೆ...

...16ನೇ ಪುಟದಿಂದ



ಸಂದರ್ಭದಲ್ಲಿ ಸರ್ಕಾರ ನಮ್ಮ ಜೊತೆ ಗಟ್ಟಿಯಾಗಿ ನಿಲ್ಲಬೇಕು. ರಾಜ್ಯ ಸರ್ಕಾರಗಳು ಹಾಲು ಉತ್ಪಾದಕರಿಗೆ ಪ್ರೋತ್ಸಾಹ ಧನ ನೀಡಿದ ಪರಿಣಾಮ ಖಾಸಗಿ ಪೈಪೋಟಿಯ ನಡುವೆಯೂ ಹಾಲು ಉತ್ಪಾದಕ ಸಂಘಗಳು ಜೀವ ಉಳಿಸಿಕೊಂಡಿವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರಾದ ಜಿ.ಪಿ. ಪಾಟೀಲರವರು ಮಾತನಾಡುತ್ತಾ, ಪತ್ತಿನ ಸಹಕಾರ ಸಂಘಗಳು ವ್ಯವಹಾರ ನಡೆಸುವವಲ್ಲಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿವೆ. ಶಾಖೆಗಳ ವಿಸ್ತರಣೆ, ಸರ್ಫೇಶಿಯಾ ಕಾಯಿದೆ ಅಡಿಯಲ್ಲಿ ಸಾಲವನ್ನು ಮರುಪಾವತಿಸಲು ಅವಕಾಶ, ಸಾಲಗಾರರ ಸಿವಿಲ್ ಸ್ಕೋರ್ ತಿಳಿಯಲು ಹಾಗೂ ಕರ್ನಾಟಕ ರಾಜ್ಯದ ಪತ್ತಿನ ಸಹಕಾರ ಸಂಘಗಳು ಎದುರಿಸುತ್ತಿರುವ ಸಮಸ್ಯೆಗಳು ಹಾಗೂ ಕಂಡುಕೊಳ್ಳಬೇಕಾದ ಪರಿಹಾರೋಪಾಯಗಳ ಕುರಿತು ತಿಳಿದುಕೊಳ್ಳಬೇಕೆಂದು ಸಲಹೆ ನೀಡಿದರು. ತರಬೇತಿ ಕಾರ್ಯಾಗಾರದಲ್ಲಿ ಸಾಗರದ ಚಾರ್ಟ್‌ಡ್ ಅಕೌಂಟೆಂಟ್ ಬಿ.ಪ್ಪಿ. ರವೀಂದ್ರನಾಥ, ಸಹಕಾರ ಸಂಘಗಳ ಉಪನಿಬಂಧಕರಾದ ಎಸ್.ಬಿ. ಮಂಜುನಾಥ ಸಿಂಗ್ ಹಾಗೂ ಅಫೆಕ್ಸ್ ಬ್ಯಾಂಕ್ ನಿವೃತ್ತ ವ್ಯವಸ್ಥಾಪಕರಾದ ಶಿವಾನಂದ ಜಿ. ಕುಲಕರ್ಣಿಯವರು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಮಹಾಲಕ್ಷ್ಮೀ ಅರ್ಬನ್ ಕೋ–ಆಪ್ ಕ್ರೆಡಿಟ್ ಸೊಸೈಟಿ ಅಧ್ಯಕ್ಷರಾದ ವಿಜಯ ಕುಲಕರ್ಣಿ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ನಿರ್ದೇಶಕರಾದ ಸಂಜಯ ಹೊಸಮಠ, ಉಮೇಶ ಬಾಳಿ, ತಮ್ಮಣ್ಣ ಬಾಲಪ್ಪ ಕೆಂಚರಡ್ಡಿ, ಕೆ.ಸಿ.ಸಿ. ಬ್ಯಾಂಕ್ ನಿರ್ದೇಶಕರಾದ ಮಂಜುನಾಥಗೌಡ ಮುರಳ್ಳಿ, ಧಾರವಾಡ ಜಿಲ್ಲಾ ಸಹಕಾರ ಯೂನಿಯನ್ನಿನ ಅಧ್ಯಕ್ಷರಾದ ಶಂಕರಪ್ಪ ಎನ್. ರಾಯನಾಳ, ಉಪಾಧ್ಯಕ್ಷರಾದ ಗೀತಾ ಎಸ್. ಕುಂಬಿ ಹಾಗೂ ನಿರ್ದೇಶಕರುಗಳು, ಧಾರವಾಡ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಉಪನಿರ್ದೇಶಕರಾದ ಆರ್. ತೇಜೋಮೂರ್ತಿ, ಸಹಾಯಕ ಯೋಜನಾಧಿಕಾರಿಗಳಾದ ಆನಂದ ಗು. ತಳವಾರ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಮಹಾಮಂಡಳದ ಸಹಕಾರ ಶಿಕ್ಷಣಾಧಿಕಾರಿ ಶರಣಬಸಪ್ಪ ಜಿ. ಕಾಟ್ರಳ್ಳಿ ಸ್ವಾಗತಿಸಿದರು. ಕಾರ್ಯಕ್ರಮದ ನೋಡಲ್ ಅಧಿಕಾರಿ ಹಾಗೂ ಗದಗ ಜಿಲ್ಲಾ ಸಹಕಾರ ಯೂನಿಯನ್ನಿನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ನಿರೂಪಿಸಿದರು. ಧಾರವಾಡ ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಸವಿತಾ ಕುರ್ಲಗೇರಿ ಹಿರೇಮಠ ಇವರು ವಂದಿಸಿದರು.

## ಸನ್ಮಾನ




ಗುಜರಾತ್ ರಾಜ್ಯ ಸಹಕಾರ ಮಹಾಮಂಡಳ ಮತ್ತು ಗುಜರಾತ್ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ಅಧ್ಯಕ್ಷರಾದ ಶ್ರೀಯುತ ಘನಶಾಮಬಾಯಿ ಅಮೀನ್ ಇವರನ್ನು ಗುಜರಾತಿನ ಅವರ ಕಛೇರಿಯಲ್ಲಿ ಪತ್ತಿನ ಮಹಾಮಂಡಳದ ನಿರ್ದೇಶಕರುಗಳಾದ ಡಾ॥ ಸಂಜಯ ಪಂಚಾಕ್ಷರಿ ಹೊಸಮಠ, ಶ್ರೀ ತಮ್ಮಣ್ಣ ಬಾಲಪ್ಪ ಕೆಂಚರಡ್ಡಿರವರು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಗುಜರಾತ್ ಮಹಾಮಂಡಳದ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ದುಶಾಂತಸಿಂಗ್ ವಾಗೆಲಾ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಮಹಿಳೆಯರ ಆರ್ಥಿಕ ಹಾಗು ಸಾಮಾಜಿಕ ಬದುಕಿನ ಪೋಷಕ
## ವಿನೂತನ ಕಾರ್ಯಚಟುವಟಿಕೆಗಳ ಮೂಲಕ ಜನಮನ್ನಣೆ ಪಡೆದ
# ಇಂದಿರಾ ಮಹಿಳಾ ಕೈಗಾರಿಕಾ ಪತ್ತಿನ ಮತ್ತು ಬಳಕೆದಾರರ ವಿವಿದೋದ್ದೇಶ ಸಹಕಾರ ಸಂಘ, ತುಮಕೂರು

**ಕರ್ನಾಟಕದಲ್ಲಿ 46 ಸಾವಿರಕ್ಕೂ ಅಧಿಕ ವಿವಿಧ ರೀತಿಯ ಸಹಕಾರ ಸಂಸ್ಥೆಗಳಿವೆ ಅವುಗಳಲ್ಲಿ 7180 ಮಹಿಳಾ ಸಹಕಾರ ಸಂಸ್ಥೆಗಳಾಗಿವೆ, ಇದೊಂದು ಸ್ವಾಗತಾರ್ಹವಾದ ಬೆಳವಣಿಗೆಯೂ ಹೌದು. ಮಹಿಳೆಯರಿಗೆ ಸ್ವ ಉದ್ಯೋಗ, ಗುಡಿಕೈಗಾರಿಕೆ, ಟೈಲರಿಂಗ್, ಗೃಹ ಉಪಯೋಗಿ ಸೇರಿದಂತೆ ಅನೇಕ ಅಗತ್ಯಗಳಿಗೆ ಮಹಿಳಾ ಸಹಕಾರ ಸಂಸ್ಥೆಗಳು ಹಾಗು ಮಹಿಳಾ ಸಹಕಾರ ಬ್ಯಾಂಕುಗಳು ಆರ್ಥಿಕವಾಗಿ ನೆರವಾಗುತ್ತಿದ್ದು ಮಹಿಳೆಯರ ಸ್ವಾವಲಂಬನಾ ಬದುಕಿನಲ್ಲಿ ಉತ್ತಮವಾದ ಪಾತ್ರವನ್ನು ನಿರ್ವಹಿಸುತ್ತಿವೆ. ಹೀಗೆ ಸಹಕಾರ ವಲಯ ಮಹಿಳೆಯರಿಗೆ ಹಲವಾರು ಅವಕಾಶಗಳನ್ನು ನೀಡುವುದರ ಮೂಲಕ ಮಹಿಳೆಯರು ಸಹ ದೇಶದ ಆರ್ಥಿಕ ಚಟುವಟಿಕೆಗಳಲ್ಲಿ ಭಾಗಿಯಾಗಲು ಅವಕಾಶವನ್ನು ಮಾಡಿಕೊಟ್ಟಿದೆ.**




ಭಾರತದ ಅಭಿವೃದ್ಧಿಯು ಯುವಜನರು ಮತ್ತು ಮಹಿಳೆಯರ ಕ್ರಿಯಾತ್ಮಕ ಪಾಲ್ಗೊಳ್ಳುವಿಕೆಯನ್ನು ಅವಲಂಬಿಸಿದೆ. ಭಾರತದಲ್ಲಿ ಇಂದು ಮಹಿಳೆಯರು ಹಲವಾರು ಕ್ಷೇತ್ರದಲ್ಲಿ ತೊಡಗಿಸಿಕೊಳ್ಳುವ ಮೂಲಕ ರಾಷ್ಟ್ರದ ಅಭಿವೃದ್ಧಿಯಲ್ಲಿ ಅಧಿಕ ಸಂಖ್ಯೆಯಲ್ಲಿ ಭಾಗಿಯಾಗುತ್ತಿದ್ದಾರೆ. ಹಲವಾರು ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಮಹಿಳೆಯರಿದ್ದಾರೆ. ಆರ್ಥಿಕವಾಗಿ ಅಬಲರಾಗಿರುವ ಮಹಿಳೆಯರನ್ನು ಆರ್ಥಿಕವಾಗಿ, ಸಾಮಾಜಿಕವಾಗಿ ಸ್ವಾವಲಂಬಿಗಳನ್ನಾಗಿ ಮಾಡುವುದು ಇಂದಿನ ಅಗತ್ಯವಾಗಿದೆ. ಇದಕ್ಕೇ ಸಹಕಾರ ವಲಯ ಸೂಕ್ತವಾಗಿದ್ದು, ದೇಶದಲ್ಲಿ ಅಂದಾಜು 8 ಲಕ್ಷ ವಿವಿಧ ರೀತಿಯ ಸಹಕಾರ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ಕ್ಷೇತ್ರ ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಹ ನೆರವಾಗುತ್ತಿವೆ. ಸಹಕಾರ ವಲಯವು ಮಾಡಿಕೊಟ್ಟಿರುವ ಈ ಅವಕಾಶಗಳನ್ನು ಉಪಯೋಗಿಸಿಕೊಂಡು ಜನ್ಮ ತಳೆದುದೇ ತುಮಕೂರಿನ ಇಂದಿರಾ ಮಹಿಳಾ ಕೈಗಾರಿಕಾ ಪತ್ತಿನ ಮತ್ತು ಬಳಕೆದಾರರ ವಿವಿದೋದ್ದೇಶ ಸಹಕಾರ ಸಂಘ.

1975ನೇ ವರ್ಷವನ್ನು ಅಂತಾರಾಷ್ಟ್ರೀಯ ಮಹಿಳಾ ವರ್ಷವೆಂದು ಘೋಷಿಸಲಾಯಿತು, ಎಲ್ಲೆಡೆಯಲ್ಲಿಯೂ ಮಹಿಳಾ ಸಮ್ಮೇಳನಗಳನ್ನು ಮಾಡಿ ಮಹಿಳಾ ವರ್ಗಕ್ಕೆ ಬೇಕಾಗಿರುವ ಅನೇಕ ಉಪಯುಕ್ತವಾದ ತೀರ್ಮಾನಗಳನ್ನು ಈ ಸಂಧರ್ಭದಲ್ಲಿ ಕೈಗೊಳ್ಳಲಾಯಿತು. ಅಂತೆಯೇ ತುಮಕೂರು ಮಹಿಳೆಯರ ಸರ್ವತೋಮುಖ ಬೆಳವಣಿಗೆಗಾಗಿ ಸ್ಥಳೀಯ ಸಮಾನ ಮನಸ್ಕ ಮಹಿಳೆಯರ ಸಹಕಾರದಿಂದ ದಿನಾಂಕ: 10.11.1975 ರಲ್ಲಿ ಇಂದಿರಾ ಮಹಿಳಾ ಸಹಕಾರ ಸಂಘವನ್ನು ತುಮಕೂರು ನಗರದ ಕೆ.ಆರ್.ಬಡಾವಣೆಯಲ್ಲಿ ಆರಂಭಿಸಲಾಯಿತು.

ದಿನಾಂಕ: 03.03.1976 ರಲ್ಲಿ ಸಂಘವು ತನ್ನ ಕಾರ್ಯಚಟುವಟಿಕೆಗಳನ್ನು ಎಸ್.ಎನ್. ತಂಗಮ್ಮರವರ ಮುಖಂಡತ್ವದಲ್ಲಿ ಸಮಾನಮನಸ್ಕರು ಸೇರಿ ಪ್ರಾರಂಭಿಸಿದರು. ದಿನಾಂಕ: 04.12.1984 ರಲ್ಲಿ ಸಹಕಾರ ಸಂಘಗಳ ಉಪನಿಬಂಧಕರವರು ಸಂಘದ ಹೆಸರನ್ನು ಇಂದಿರಾ ಮಹಿಳಾ ಬಳಕೆದಾರರ ಸಹಕಾರ ಸಂಘ ನಿಯಮಿತ ಎಂಬುದನ್ನು ಇಂದಿರಾ ಮಹಿಳಾ ಕೈಗಾರಿಕಾ ಪತ್ತಿನ ಮತ್ತು ಬಳಕೆದಾರರ ವಿವಿದೋದ್ದೇಶ ಸಹಕಾರ ಸಂಘ ಎಂದು ತಿದ್ದು ಪಡಿ ಮಾಡಿದರು.

### ಈ ಸಂಘದ ಉದ್ದೇಶಗಳು

- ಮಹಿಳೆಯರಲ್ಲಿ ಪರಸ್ಪರ ಅರಿವು, ನಂಬಿಕೆ ಮತ್ತು ಐಕ್ಯತೆ ಸಾಧಿಸುವುದು ಮತ್ತು ಆರ್ಥಿಕ ಅಭಿವೃದ್ಧಿ ಸಾಧನೆ ಹಾಗೂ ನ್ಯಾಯಬೆಲೆಯಲ್ಲಿ ವಹಿವಾಟುಗಳನ್ನು ನಡೆಸುವುದು.
- ದಿನಾಂಕ: 15.12.1980ರಲ್ಲಿ ಹೆಚ್.ಎಂ.ಟಿ ಗಡಿಯಾರ ಕಾರ್ಖಾನೆ ಯವರು ಮಹಿಳೆಯರಿಗೆ ಅನಕೂಲವಾಗುವ ಒಂದು ಘಟಕವನ್ನು ಕೊಟ್ಟು ಪ್ರೋತ್ಸಾಹಿಸಿರುತ್ತಾರೆ. ಸಮಾಜ ಕಲ್ಯಾಣ ಸಲಹಾ ಮಂಡಳಿಯಿಂದ ವೃತ್ತಿಪರ ಹೊಲಿಗೆ ತರಬೇತಿ ತರಗತಿಯಲ್ಲಿ 1 ರಿಂದ 6 ತಂಡಗಳನ್ನು ಮಾಡಿ, ಪ್ರತಿ ತಂಡದಲ್ಲಿ 25 ಮಂದಿ ಮಹಿಳೆಯರಿಗೆ ಹೊಲಿಗೆ ಶಿಕ್ಷಣ ತರಬೇತಿಯನ್ನು ಕೊಡುವುದು.
- ಮಹಿಳೆಯರಲ್ಲಿ ಸಹಕಾರ ಕ್ಷೇತ್ರದ ಕುರಿತು ಜಾಗೃತಿ ಮೂಡಿಸುವುದು.

### ಸಂಘದ ಕಾರ್ಯಚಟುವಟಿಕೆಗಳು

“ವಿಶ್ವ” ಯೋಜನೆಯಡಿಯಲ್ಲಿ ಏರ್ಪಡಿಸಿದ್ದ ವಸ್ತು ಪ್ರದರ್ಶನ ಹಾಗೂ ಮಾರಾಟ ಮಳಿಗೆಯಲ್ಲಿ ಸಂಘವು ಭಾಗವಹಿಸಿದ್ದು, ವಸ್ತು ಪ್ರದರ್ಶನದಲ್ಲಿ ಹೆಚ್ಚು ಮಾರಾಟದ ಕಾರಣಗಳಿಗೆ ಪ್ರಥಮ ಬಹುಮಾನವನ್ನು ಪಡೆದುಕೊಂಡಿರುತ್ತದೆ.

ಹಿಂದಿನಿಂದಲೂ ಕರ್ನಾಟಕ ರಾಜ್ಯ ಸಮಾಜ ಕಲ್ಯಾಣ ಸಲಹಾ

ಮಂಡಳಿಯ ನೆರವಿನಿಂದ ಎಸ್.ಎಸ್.ಎಲ್.ಸಿ ತರಗತಿಯಲ್ಲಿ ಅನುತ್ತೀರ್ಣರಾದವರಿಗೆ 2 ಬ್ಯಾಚ್‌ನಲ್ಲಿ ಪ್ರತಿ ಬ್ಯಾಚ್‌ನಲ್ಲಿ 25 ಮಂದಿ ಮಹಿಳೆಯರಿಗೆ ಉಚಿತ ಶಿಕ್ಷಣವನ್ನು ಕೊಟ್ಟಿದ್ದು, ಅವರುಗಳು ಹಲವಾರು ಮಂದಿ ಎಸ್.ಎಸ್.ಎಲ್.ಸಿಯಲ್ಲಿ ಉತ್ತೀರ್ಣರಾಗಿರುತ್ತಾರೆ. 1981ರಲ್ಲಿ ಕರ್ನಾಟಕ ರಾಜ್ಯ ಕಲ್ಯಾಣ ಸಲಹಾ ಮಂಡಳಿಯ ನೆರವಿನಿಂದ ಹೈನುಗಾರಿಕೆ ಘಟಕ ಒಂದನ್ನು ಮೊದಲನೇ ಬ್ಯಾಚ್‌ನಲ್ಲಿ 10 ಜನ ಬಡ ಮಹಿಳೆಯರಿಗೆ ಹಸು ಅಥವಾ ಎಮ್ಮೆಗಳನ್ನು ಕೊಳ್ಳಲು ಪ್ರತಿಯೊಬ್ಬರಿಗೂ ರೂ.3000 ಗಳ ಬಡ್ಡಿರಹಿತ ಸಾಲವನ್ನು ರೂ.200 ಗಳ ಪಾತ್ರೆ ಸಾಲವನ್ನು ಒಟ್ಟು 3200 ಬಡ್ಡಿರಹಿತ ಸಾಲವನ್ನು ಕೊಟ್ಟು ಅವರ ಸ್ವಂತ ಜೀವನಕ್ಕೆ ಅವಕಾಶ ಮಾಡಿಕೊಡಲಾಗಿದೆ.

### ತರಬೇತಿ ವ್ಯವಸ್ಥೆ

ಜಿಲ್ಲಾ ಕೈಗಾರಿಕಾ ಕೇಂದ್ರ ನೆರವಿನಿಂದ ಆರ್.ಪಿ.ಐ ಸ್ಕೀಂನಲ್ಲಿ 10 ಮಂದಿ ಮಹಿಳೆಯರಿಗೆ 3 ಹಂತದಲ್ಲಿ ಹೊಲಿಗೆ ಹಾಗೂ ಎಂಬ್ರಾಯಿಡರಿ ತರಬೇತಿಯನ್ನು ಕೊಡಿಸಲಾಗಿದೆ. ಸಮಾಜ ಕಲ್ಯಾಣ ಇಲಾಖೆಯಿಂದ ಹಾಗೂ ಮಕ್ಕಳ ಪುರೋಭಿವೃದ್ಧಿ ಇಲಾಖೆಯಿಂದ ವಿದ್ಯಾವಿಕಾಸನ ಯೋಜನೆಯಡಿಯಲ್ಲಿ ಸರ್ಕಾರಿ ಶಾಲಾ ಸಮವಸ್ತ್ರಗಳನ್ನು ಹೊಲೆದು ಕೊಡಲಾಗಿದೆ. ಸಂಘವು ಲಾಭದಾಯಕವಾಗಿ ಕೆಲಸ ನಿರ್ವಹಿಸುತ್ತಿದ್ದು, 2001–02ನೇ ಸಾಲಿನಲ್ಲಿ ಜನ ಶಿಕ್ಷಣ ಸಂಸ್ಥೆಯ ಸಹಯೋಗದಿಂದ 28 ಜನ ಮಹಿಳೆಯರಿಗೆ 8 ತಿಂಗಳ ಅವಧಿಯಲ್ಲಿ 'ಫ್ಯಾಷನ್ ಮೇಕಿಂಗ್‌ಡಿಸೈನ್' ತರಬೇತಿಯನ್ನು, ಮೆಹಂದಿ ತರಬೇತಿ ಹಾಗೂ ಫ್ಯಾಬ್ರಿಕ್ ಪೈಂಟ್ ತರಬೇತಿ, ಸೋಪ್ ಪೌಡರ್ ತಯಾರಿಸುವ ತರಬೇತಿ, ಗ್ಯಾಸ್ ಸ್ಟೌವ್ ರಿಪೇರಿ ತರಬೇತಿ ಕೊಡಿಸಿದ್ದು, ಇದರ ಪ್ರಯೋಜನವನ್ನು ಹಲವಾರು ಮಹಿಳೆಯರು ಪಡೆದುಕೊಂಡಿರುತ್ತಾರೆ. ಸುಮಾರು 10 ವರ್ಷಗಳಿಂದ ಕರ್ನಾಟಕ ರೇಷ್ಮೆ ಉದ್ಯಮದ ವತಿಯಿಂದ ಕೆ.ಎಸ್.ಐ.ಸಿ ಸೀರೆಗಳ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ನಮ್ಮ ಸಂಘದಿಂದ ವರ್ಷಕ್ಕೆ 2 ಬಾರಿ ಹಮ್ಮಿಕೊಳ್ಳುತ್ತಿದ್ದು, ಇದರಿಂದಾಗಿ ಸಂಘದ ಮಧ್ಯಮ ವರ್ಗದ ಮಹಿಳೆಯರಿಗೂ ಸಹ ಅನುಕೂಲವಾಗುವಂತೆ ಸಾಲದ ರೂಪದಲ್ಲಿ ಕೆ.ಎಸ್.ಐ.ಸಿ ಸೀರೆಗಳನ್ನು ಖರೀದಿಸಿ, ಸುಲಭ ಕಂತುಗಳ ರೂಪದಲ್ಲಿ ಪಾವತಿಸಲು ಅನುವು ಮಾಡಿಕೊಡಲಾಗಿದೆ.

ಸಂಘದಲ್ಲಿ ಸುಮಾರು ಒಂದು ಸಾವಿರಕ್ಕಿಂತ ಅಧಿಕ ಸದಸ್ಯರಿದ್ದು, ಸಂಘದಲ್ಲಿ ಗೃಹೋಪಯೋಗಿ ವಸ್ತುಗಳಾದ ಬಟ್ಟೆ, ಮಹಿಳೆಯರಿಗೆ ಬೇಕಾದ ಎಲ್ಲಾ ತರಹದ ಉಡುಪುಗಳು, ಬೆಳಗಾಂ ಪಾತ್ರೆ, ಶುದ್ಧ ಹರಿಶಿನ ಅದರಲ್ಲೂ ನಮ್ಮ ಸಂಘದಲ್ಲಿ ಶುದ್ಧರೇಷ್ಮೆ ಸೀರೆಗಳು ಪ್ರಸಿದ್ಧವಾಗಿವೆ, ಗೃಹೋಪಯೋಗಿ ವಸ್ತುಗಳು ವರ್ಷಕ್ಕೆ 50.00 ಲಕ್ಷದವರೆಗೂ ಮಾರಾಟವಾಗುತ್ತಿದೆ. ಸದಸ್ಯರಿಗೆ ಅನುಕೂಲವಾಗಲು ಗೃಹೋಪಯೋಗಿ ವಸ್ತುಗಳ ಮೇಲೆ ವ್ಯಾಪಾರ ಸರಕು ಸಾಲವನ್ನು ನೀಡಲಾಗುತ್ತಿದ್ದು ಸಂಘದ ಸದಸ್ಯರಿಗೆ ರೂ.5000/– ರಿಂದ 50,000/– ಗಳವರೆಗೆ ಜಾಮೀನು ಆಧಾರ ಸಾಲವನ್ನು ಗರಿಷ್ಠ 25 ಕಂತುಗಳವರೆಗೆ ನೀಡಲಾಗುತ್ತಿದೆ. ಸಂಘದಲ್ಲಿರುವ ಸದಸ್ಯರಿಗೆ ನಗದು ಸಾಲ, ವ್ಯಾಪಾರ ಸರಕು ಸಾಲ, ವಾಹನ ಸಾಲ, ಸ್ಥಿರಾಸ್ತಿ ಸಾಲ, ಠೇವಣಿ ಆಧಾರಿತ ಸಾಲಗಳನ್ನು ಸಹ ನೀಡಿ ಸದಸ್ಯರಿಗೆ ಆರ್ಥಿಕ ಬೆಂಬಲವನ್ನು ನೀಡಲಾಗುತ್ತಿದೆ. ಮಹಿಳೆಯರು ತಮ್ಮ ಹಣವನ್ನು ಜೋಪಾನ ಮಾಡಲು ಹಾಗೂ ಉಳಿಸಲು ಸಂಘದಲ್ಲಿ ಖಾಯಂ ಠೇವಣಿ ಹಾಗೂ ಸಂಚಿತ ಠೇವಣಿಗಳನ್ನು ಸಂಗ್ರಹಿಸಿ, ಗರಿಷ್ಠ ಬಡ್ಡಿದರ ಶೇ. 9.5% ರಷ್ಟು ನೀಡಲಾಗುತ್ತಿದೆ.

### ಸ್ವಂತ ಕಟ್ಟಡ

ಸಂಘವು ತನ್ನ ಸ್ವಂತ ಕಟ್ಟಡವನ್ನು ಸಹ ಹೊಂದಿದ್ದು, ಸಂಘದ ರಜತ ಮಹೋತ್ಸವವನ್ನು ದಿನಾಂಕ: 22.11.2003 ರಲ್ಲಿ ಆಚರಿಸಲಾಯಿತು. ಈ ಕಟ್ಟಡದ ಸವಿನೆನಪಿಗಾಗಿ ಶಂಕುಸ್ಥಾಪನೆಯನ್ನು ಸಿದ್ದಗಂಗಾ ಮಠಾಧ್ಯಕ್ಷರಾದ ಡಾ॥ ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮಿಗಳವರಿಂದ ನೆರವೇರಿಸಲಾಯಿತು. ಈಗ ಕಟ್ಟಡ ನಿರ್ಮಾಣದ ಕಾರ್ಯವು ಪೂರ್ಣಗೊಂಡಿದ್ದು, ನೆಲ ಅಂತಸ್ಥಿನಲ್ಲಿ 4 ವಾಣಿಜ್ಯ ಮಳಿಗೆಗಳನ್ನು ಹೊಂದಿದ್ದು, ಮೊದಲನೇ ಅಂತಸ್ಥಿನ ಕಟ್ಟಡ ನಿರ್ಮಾಣವು ಪ್ರಗತಿಯಲ್ಲಿದೆ ಹಾಗೂ ಇದರ ಪ್ರಾರಂಭೋತ್ಸವವನ್ನು ದಿನಾಂಕ: 16.08.2018 ರಂದು ಕಟ್ಟಡ ಉದ್ಘಾಟನೆಯು ಡಾ॥ ಶ್ರೀ ಶಿವಾನಂದ ಶಿವಚಾರ್ಯ ಮಹಾಸ್ವಾಮಿಗಳವರಿಂದ ನೆರವೇರಿಸಲಾಯಿತು. ಪ್ರಸ್ತುತ 4 ವಾಣಿಜ್ಯ ಮಳಿಗೆಗಳನ್ನು ಬಾಡಿಗೆಗೆ ನೀಡಿದ್ದು, ಮಾಹೆಯಾನ 4 ವಾಣಿಜ್ಯ ಮಳಿಗೆಗಳಿಂದ ರೂ.21,000/– ಬಾಡಿಗೆ ಬರುತ್ತಿದೆ.


ಪ್ರಸ್ತುತ ಸಂಘದಲ್ಲಿ ಅಧ್ಯಕ್ಷರು, ಉಪಾಧ್ಯಕ್ಷರನ್ನೊಳಗೊಂಡಂತೆ, 13 ನಿರ್ದೇಶಕರು ಹಾಗೂ 3 ಜನ ಸಿಬ್ಬಂದಿ ವರ್ಗದವರು ಕಾರ್ಯನಿರ್ವಹಿಸುತ್ತಿದ್ದು, ಒಂದು ಉತ್ತಮ ಮಹಿಳಾ ಸಂಘವೆಂದು ಹೆಸರು ಪಡೆದು, ಹಲವಾರು ಸಂಘ ಸಂಸ್ಥೆಗಳು ಕಾರ್ಯ ವೈಖರಿಯನ್ನು ವೀಕ್ಷಿಸಲು ಸಂಘಕ್ಕೆ ಭೇಟಿ ನೀಡಿರುತ್ತಾರೆ.



**ಆಡಳಿತ ಮಂಡಳಿ ಸದಸ್ಯರು : ಪಿ.ಕೆ. ಉಮಾದೇವಿ – ಅಧ್ಯಕ್ಷರು, ವಿ. ಸುಜಾತ – ಉಪಾಧ್ಯಕ್ಷರು**

**ನಿರ್ದೇಶಕರುಗಳು:** ಟಿ.ಎನ್. ಶೀಲವತಿ, ಬಿ.ಎಸ್. ಯಶೋಧ ಶಂಕರ್, ಯಶೋಧಮ್ಮ, ಸರ್ವಮಂಗಳ, ಭಾಗೀರಥಮ್ಮ, ಟಿ.ಜೆ. ಶೈಲ, ಬಿ ಸುಜಾತ, ಚಂದ್ರಕಲ, ಟಿ.ಎಸ್. ಶೈಲಜ, ಇಂದಿರಮ್ಮ, ವಿ ವಾಣಿ.

# ಅಭಿನಂದನೆ ಸಲ್ಲಿಕೆ




ಬ್ರಹ್ಮಶ್ರೀ ನಾರಾಯಣ ಗುರು ಧರ್ಮ ಪರಿಪಾಲನಾ ಸಂಘದ ವತಿಯಿಂದ ಮೈಸೂರು ನಗರದ ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಶ್ರೀ ಜೆ.ಪಿ.ನಾರಾಯಣಸ್ವಾಮಿ ಜಯಂತೋತ್ಸವದ ಪ್ರಯುಕ್ತ ಸಹಕಾರ ಸಂಘಗಳ ಪ್ರಮುಖರ ಸಮಾವೇಶದಲ್ಲಿ ಮೈಸೂರಿನ ಸಾಧು ಶೆಟ್ಟಿ ನೌಕರರ ಸಹಕಾರ ಸಂಘದ ವತಿಯಿಂದ ಅಧ್ಯಕ್ಷರು, ಪದಾಧಿಕಾರಿಗಳು ಪತ್ತಿನ ಮಹಾಮಂಡಳದ ಅಧ್ಯಕ್ಷರಾದ ಶ್ರೀ ವಿ.ರಾಜುರವರನ್ನು ಸನ್ಮಾನಿಸಿ ಗೌರವಿಸಿದರು.




ಮೈಸೂರು ನಗರದ ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ನಡೆದ ಈಡಿಗ ಸಮಾಜದ 26 ಒಳಪಂಗಡಗಳ ಸಹಕಾರ ಸಂಘಗಳ ಪ್ರಮುಖರ ಸಮಾವೇಶವನ್ನು ಪತ್ತಿನ ಮಹಾಮಂಡಳದ ಅಧ್ಯಕ್ಷರಾದ ಶ್ರೀ ವಿ.ರಾಜುರವರು ಉದ್ಘಾಟನೆ ನೆರವೇರಿಸಿದರು.